ಸಂಪುಟ : 10 ಸಂಚಿಕೆ: 156 ಪುಟ : 4+2 ಬೆಲೆ: 3.00 ಶುಕ್ರವಾರ ಜುಲೈ 25 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 156 Pages : 4+2 Price : 3.00 Friday July 25 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ವೇತನ ಸಹಿತ ಬಿ.ಇಡಿ ವ್ಯಾಸಂಗಕ್ಕೆ ಅನುಮತಿ

■ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯದ ಅನುದಾನಿತ ಪದವಿಪೂರ್ವ ಕಾಲೇಜುಗಳಲ್ಲಿ 04–02–2008ರ ನಂತರ ನೇಮಕಗೊಂಡು ಅನುದಾನಕ್ಕೆ ಒಳಪಟ್ಟ 364 ಬಿ.ಇಡಿ ಪದವಿ ಹೊಂದದ್ದ ಉಪನ್ಯಾಸಕರು ವೇತನ ಸಹಿತ ವ್ಯಾಸಂಗ ಕೈಗೊಳ್ಳಲು ಶಾಲಾ ಶಿಕ್ಷಣ ಇಲಾಖೆ ಜುಲೈ 24ರಂದು ಅನುಮತಿ ನೀಡಿ ಆದೇಶ ಹೊರಡಿಸಿದೆ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಹಾಗೂ ಭೋಜೇಗೌಡ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಈ ಆದೇಶದಿಂದ ಅನುದಾನಿತ ಪದವಿಪೂರ್ವ ಕಾಲೇಜುಗಳಲ್ಲಿ ಬಿ.ಇಡಿ ರಹಿತವಾಗಿ ಕಾರ್ಯನಿರ್ವಹಿಸುತ್ತಿರುವ 364 ಉಪನ್ಯಾಸಕರು ನಿಟ್ಟುಸಿರು ಬಿಡುವಂತಾಗಿದೆ. ಉಪನ್ಯಾಸಕರಾಗಿ ಸುಮಾರು 15 ವರ್ಷ ಸೇವೆ ಸಲ್ಲಿಸಿ ತದನಂತರ ವೇತನ ರಹಿತವಾಗಿ 2 ವರ್ಷ ಬಿ.ಇಡಿ ಪದವಿ ವ್ಯಾಸಂಗಕ್ಕೆ ಹೋಗುವುದು ಅವರ ಇಡೀ ಕುಟುಂಬವನ್ನು ಆರ್ಥಿಕ ದುಸ್ಥಿತಿಗೆ ತಳ್ಳಿದಂತಾಗುತ್ತಿತ್ತು. ಈ ಎಲ್ಲ ಸಮಸ್ಯೆಗಳನ್ನು ಪದವೀಧರ ಮತಕ್ಷೇತ್ರ ಮತ್ತು ಶಿಕ್ಷಕರ ಮತಕ್ಷೇತ್ರಗಳಿಂದ ಆಯ್ಕೆಯಾದ ಎಲ್ಲಾ ವಿಧಾನ ಪರಿಷತ್ ಸದಸ್ಯರು ಹಾಗೂ ಉಪನ್ಯಾಸಕರ ಸಂಘಟನೆಯವರು ಮುಖ್ಯಮಂತ್ರಿಗಳ ಹಾಗೂ ಶಿಕ್ಷಣ ಸಚಿವರ ಗಮನಕ್ಕೆ ತಂದು ಒತ್ತಡ ಹೇರಿದ ಪರಿಣಾಮ ಸರ್ಕಾರ ಈ ನಿರ್ಣಯ ಕೈಗೊಂಡಿದೆ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ ಸಂಕನೂರ ಹೇಳಿದ್ದಾರೆ. ಈ ಹಿಂದೆ ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಬಿ.ಇಡಿ ಪದವಿ ಹೊಂದದೆ ನೇಮಕಗೊಂಡ ಉಪನ್ಯಾಸಕರಿಗೆ 2 ಬ್ಯಾಚ್‌ಗಳಲ್ಲಿ ವೇತನ ಸಹಿತ ಬಿ. ಇಡಿ. ವ್ಯಾಸಂಗ ಕೈಗೊಳ್ಳಲು ಅನುಮತಿ ನೀಡಿತ್ತು.

ಆದಾದ ನಂತರ ಜೆ.ಓ.ಸಿ ಕೋರ್ಸ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ ಬಿ.ಇಡಿ ರಹಿತ ಉಪನ್ಯಾಸಕರಿಗೂ ವೇತನ ಸಹಿತ ವ್ಯಾಸಂಗಕ್ಕೆ ಅನುಮತಿ ನೀಡಿದ ಮಾದರಿಯಲ್ಲಿಯೇ ಸರ್ಕಾರ ಆದೇಶ ಹೊರಡಿಸಿರುವುದು ಉಪನ್ಯಾಸಕರಿಗೆ ಸಂತಸ ತಂದಿದೆ ಎಂದು ಹೇಳಿದ್ದಾರೆ.

### ಯೂರಿಯಾ ಖರೀದಿಗೆ ಮುಗಿಬಿದ್ದ ರೈತರು । ಹೆಚ್ಚಿದ ಬೇಡಿಕೆ, ಗೊಬ್ಬರದ ಕೊರತೆ

# ಗದಗ ಜಿಲ್ಲೆಗೆ ಮಲತಾಯಿ ಧೋರಣೆ?

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಯೂರಿಯಾ ಗೊಬ್ಬರಕ್ಕಾಗಿ ಪಟ್ಟಣದಲ್ಲಿ ಗುರುವಾರವೂ ಕೃಷಿ ಪರಿಕರ ಅಂಗಡಿ ಮುಂದೆ ರೈತರ ಸರದಿ, ನೂಕು–ನುಗ್ಗಾಟ ನಡೆದು, ಪೊಲೀಸರ ಬಂದೋಬಸ್ತ್‌ನೊಂದಿಗೆ ಗೊಬ್ಬರ ವಿತರಿಸಲಾಯಿತು.

ಕಳೆದ 8/10 ದಿನಗಳಿಂದ ನಿರಂತರ ಮಳೆಯಾಗುತ್ತಿರುವುದರಿಂದ ಮೆಕ್ಕೆಜೋಳ, ಈರುಳ್ಳಿ, ಹತ್ತಿ ಸೇರಿ ಬೆಳೆಗಳಿಗೆ ಯೂರಿಯಾ ಗೊಬ್ಬರದ ಅವಶ್ಯಕತೆಯಿದೆ. ಆದರೆ ಯೂರಿಯಾ ಗೊಬ್ಬರದ ಕೊರತೆಯಿಂದ ರೈತರು ದಿನವೂ ಅಂಗಡಿಗಳಿಗೆ ಎಡತಾಕುತ್ತಿದ್ದಾರೆ. 4 ದಿನಗಳ ಹಿಂದಷ್ಟೇ ಪಟ್ಟಣದಲ್ಲಿ 200 ಟನ್ ಯೂರಿಯಾ ಬಂದಿದ್ದರೂ ಅನೇಕ ರೈತರಿಗೆ ಗೊಬ್ಬರ ಸಿಕ್ಕಿರಲಿಲ್ಲ. ಗುರುವಾರ ಪಟ್ಟಣದಲ್ಲಿ ಗೊಬ್ಬರ ಬಂದಿದೆ ಎಂಬ ಸುದ್ದಿ ತಿಳಿದು ಮಹಿಳೆಯರು, ಮಕ್ಕಳು ಸೇರಿ



ನೂರಾರು ರೈತರು ದೌಡಾಯಿಸಿ ಅಂಗಡಿ ಮುಂದೆ ಜಮಾಯಿಸಿದ್ದರು.

ನೂಕುನುಗ್ಗಲು, ಪರಸ್ಪರ ವಾಗ್ವಾದಕ್ಕಿಳಿದ ಘಟನೆಗಳೂ ನಡೆದವು. ವಿಷಯ ತಿಳಿದ ಪೊಲೀಸರು ರೈತರನ್ನು ಸಾಲಿನಲ್ಲಿ ನಿಲ್ಲಿಸಿದರು. ಕೃಷಿ ಇಲಾಖೆ ಅಧಿಕಾರಿಗಳ ಸೂಚನೆಯಂತೆ ಪ್ರತಿ ರೈತರಿಗೆ 2 ಚೀಲ ಕೊಟ್ಟು ಸಮಾಧಾನಪಡಿಸಿದರಾದರೂ ಸರದಿ ಸಾಲಿನಲ್ಲಿ ನಿಂತಿದ್ದ ಎಲ್ಲರಿಗೂ ಗೊಬ್ಬರ ಲಭ್ಯವಾಗಲಿಲ್ಲ.

ಮೆಕ್ಕೆಜೋಳಕ್ಕೆ ಹೆಚ್ಚಿನ ಪ್ರಮಾಣದಲ್ಲಿ ಯೂರಿಯಾ ಬಳಸುತ್ತಿದ್ದು, ಈ ವರ್ಷ ಲಕ್ಷ್ಮೇಶ್ವರ ತಾಲೂಕಿನಲ್ಲಿಯೇ 16 ಸಾವಿರ ಹೆಕ್ಟೇರ್‌ನಲ್ಲಿ ಮೆಕ್ಕೆಜೋಳ ಬಿತ್ತನೆಯಾಗಿದೆ. ಅಲ್ಲದೇ ಲಕ್ಷ್ಮೇಶ್ವರಕ್ಕೆ ನೆರೆಯ ಕುಂದಗೋಳ, ಶಿರಹಟ್ಟಿ, ಶಿಗ್ಗಾಂವ, ಸವಣೂರ ತಾಲೂಕಿನ ರೈತರೂ ಗೊಬ್ಬರ ಖರೀದಿಗಾಗಿ ಬರುತ್ತಾರೆ. ಈ ಕಾರಣದಿಂದ ಪೂರೈಕೆ ಕಡಿಮೆಯಿದ್ದು, ಬೇಡಿಕೆ ಹೆಚ್ಚಿದ್ದರಿಂದ ಗೊಬ್ಬರದ ಕೊರತೆ ಕಾಡುತ್ತಿದೆ. ಈ ವರ್ಷ ಮಳೆ ಉತ್ತಮವಾಗಿ ಬೆಳೆ ಚೆನ್ನಾಗಿ ಬೆಳೆಯುತ್ತಿದೆ. ಸದ್ಯ ಗೊಬ್ಬರ ಹಾಕಿದರೆ ಉತ್ತಮ ಇಳುವರಿ ಬರುತ್ತದೆ. ಆದರೆ ಗೊಬ್ಬರವೇ ಸಿಗುತ್ತಿಲ್ಲ. ಗದಗ ಜಿಲ್ಲೆಗೆ ಗೊಬ್ಬರ ಪೂರೈಕೆಯಲ್ಲಿ ಪ್ರತಿಬಾರಿ ಮಲತಾಯಿ ಧೋರಣೆ ಎದ್ದು ಕಾಣುತ್ತಿದೆ. ಜಿಲ್ಲೆಗೆ ಅವಶ್ಯವಿರುವಷ್ಟು ಗೊಬ್ಬರವನ್ನು ಕಂಪನಿಯವರು ಪೂರೈಕೆ ಮಾಡುತ್ತಿಲ್ಲ. ಗೊಬ್ಬರ ಕಂಪನಿಗಳು ರೈತರ ಈ ಬೇಡಿಕೆಯನ್ನು ಬಂಡವಾಳ ಮಾಡಿಕೊಂಡು ವ್ಯಾಪಾರಸ್ಥರಿಗೆ ಯೂರಿಯಾದೊಂದಿಗೆ ಇತರೇ ಕಾಂಪ್ಲೆಕ್ಸ್ ಗೊಬ್ಬರ ಖರೀದಿಸುವಂತೆ ಕಟ್ಟಳೆ ಹಾಕುತ್ತಿದ್ದಾರೆ. ಇದರಿಂದ ಅಂಗಡಿಕಾರರು ಗೊಬ್ಬರ ಮಾರಾಟಕ್ಕೆ ಹಿಂದೇಟು ಹಾಕುತ್ತಿದ್ದಾರೆ.

> ರೈತರು ಸ್ಪರ್ಧೆಗಿಳಿದಂತೆ ಅಗತ್ಯಕ್ಕಿಂತ ಹೆಚ್ಚಿನ ಪ್ರಮಾಣದಲ್ಲಿ ಯೂರಿಯಾ ಬಳಸುವುದರಿಂದ ಭವಿಷ್ಯದಲ್ಲಿ ಭೂಮಿ ಬರಡಾಗಿ ಮುಂದೆ ಯಾವುದೇ ಬೆಳೆ ಬರುವುದಿಲ್ಲ. ಮೆಕ್ಕೆಜೋಳದೊಂದಿಗೆ ಇತರೇ ಸಾಂಪ್ರದಾಯಿಕ ಬೆಳೆಯನ್ನು ರೈತರು ಮರೆಯಬಾರದು. ಯೂರಿಯಾ ಅಗತ್ಯವಿದ್ದಲ್ಲಿ ರೈತರು ಹರಳು ಯೂರಿಯಾಕ್ಕೆ ಮುಗಿಬೀಳುವ ಬದಲು ನ್ಯಾನೋ ಯೂರಿಯಾ ಬಳಸಬೇಕು.
>
> **– ರೇವಣಪ್ಪ ಮನಗೂಳಿ.**
> ಸಹಾಯಕ ಕೃಷಿ ನಿರ್ದೇಶಕರು, ಶಿರಹಟ್ಟಿ.

> ಈ ನಡುವೆ ಗೊಬ್ಬರದ ಅಂಗಡಿಗಳಿಂದ ರೈತರ ಹೆಸರಿನಲ್ಲಿ ಕೆಲವರು ಯೂರಿಯಾ ಗೊಬ್ಬರ ಸಂಗ್ರಹಿಸಿ ಲಾಭಕ್ಕಾಗಿ ಹೆಚ್ಚಿನ ದರಕ್ಕೆ ಮಾರಾಟ ಮಾಡುತ್ತಿದ್ದಾರೆ. ಇದು ಕೃತಕ ಅಭಾವಕ್ಕೆ ಕಾರಣವಾಗುತ್ತಿದೆ ಎಂಬ ಮಾತುಗಳು ಕೇಳಿಬರುತ್ತಿವೆ.

### ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಎಬಿವಿಪಿ ವತಿಯಿಂದ ಪ್ರತಿಭಟನೆ, ಮನವಿ ಸಲ್ಲಿಕೆ

# ವಿದ್ಯಾರ್ಥಿ ವಿರೋಧಿ ನೀತಿಗೆ ಖಂಡನೆ




> ಲಕ್ಷ್ಮೇಶ್ವರ ಬಸ್ ನಿಲ್ದಾಣದಿಂದ ವಿದ್ಯಾರ್ಥಿಗಳಿಗೆ ಸರಿಯಾಗಿ ಬಸ್ ವ್ಯವಸ್ಥೆ ಇಲ್ಲ. ಇದರಿಂದ ಕಾಲೇಜಿಗೆ ಸರಿಯಾದ ಸಮಯಕ್ಕೆ ತಲುಪಲಾಗುತ್ತಿಲ್ಲ. ಈ ಬಗ್ಗೆ ಹಲವು ಹಲವಾರು ಬಾರಿ ಮನವಿ ಮಾಡಿದರೂ ಸ್ಪಂದಿಸಿಲ್ಲ. ಚಾಲಕರಿಗೆ ವಿದ್ಯಾರ್ಥಿಗಳು ಪ್ರಶ್ನೆ ಮಾಡಿದರೆ ವಿದ್ಯಾರ್ಥಿಗಳ ಮೇಲೆ ಹಲ್ಲೆಗೆ ಯತ್ನಿಸಿ ಅವಾಚ್ಯ ಶಬ್ದ ಬಳಸುತ್ತಾರೆ. ಅಂತಹ ಚಾಲಕರ ಮೇಲೆ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಜ್ಯ ಸರ್ಕಾರ ವಿದ್ಯಾರ್ಥಿ ವಿರೋಧಿ ನೀತಿಯನ್ನು ಅನುಸರಿಸುತ್ತಿದ್ದು, ಶಾಲಾ, ಕಾಲೇಜು ಮಕ್ಕಳಿಗೆ ವಿದ್ಯಾರ್ಥಿವೇತನ ಬಿಡುಗಡೆ, ವಸತಿ ನಿಲಯಗಳಲ್ಲಿ ಮೂಲ ಸೌಲಭ್ಯ ಕಲ್ಪಿಸುವದು ಹಾಗೂ ಸಮರ್ಪಕ ಬಸ್ ಸೌಲಭ್ಯ ಕಲ್ಪಿಸುವಂತೆ ಆಗ್ರಹಿಸಿ ಎಬಿವಿಪಿ ಸಂಘಟನೆಯಿಂದ ವಿದ್ಯಾರ್ಥಿಗಳು ಪಟ್ಟಣದ ಬಸ್‌ನಿಲ್ದಾಣದ ಎದುರು ಸೇರಿ ಪ್ರತಿಭಟನೆ ನಡೆಸಿದರು.

ಈ ವೇಳೆ ರಾಜ್ಯ ಕಾರ್ಯಕಾರಣಿ ಸದಸ್ಯ ಅಭಿಷೇಕ ಉಮಚಗಿ, ತಾಲೂಕು ಸಂಚಾಲಕ ಪ್ರಕಾಶ ಕುಂಬಾರ ಮಾತನಾಡಿ, ಹಾಸ್ಟೆಲ್‌ಗಳಿಗೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳ ಆಯ್ಕೆ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕು. ವಸತಿ ನಿಲಯಗಳಿಗೆ ಸರಕಾರ ನೀಡುವ ಕಿಟ್‌ಗಳನ್ನು ತಕ್ಷಣ ನೀಡಬೇಕು. ನೂರೆಂಟು ಸಮಸ್ಯೆಗಳ ನಡುವೆ ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಸಲ್ಲಿಸಿ ಚಾತಕ ಪಕ್ಷಿಯಂತೆ ಕಾದು ಕುಳಿತರೂ ಕೊನೆಗೆ ಸರ್ಕಾರ ಇಲ್ಲ–ಸಲ್ಲದ ಸಬೂಬ ನೀಡಿ ವಿದ್ಯಾರ್ಥಿವೇತನ ಕಡಿತಗೊಳಿಸುತ್ತಿದ್ದಾರೆ ಎಂದು ಆರೋಪಿಸಿದರು. ಕಳೆದ ವರ್ಷ ಬಾಕಿ ಇರುವ ರಾಜ್ಯದ ಲಕ್ಷಾಂತರ ವಿದ್ಯಾರ್ಥಿಗಳ ವಿದ್ಯಾರ್ಥಿವೇತನವನ್ನು ತಕ್ಷಣ ವಿದ್ಯಾರ್ಥಿಗಳ ಖಾತೆಗೆ ಜಮೆ ಮಾಡಬೇಕು. ವಿದ್ಯಾಸಿರಿ ವೇತನ ಸರಿಯಾಗಿ ಜಮೆ ಆಗುತ್ತಿಲ್ಲ. ರೈತ ವಿದ್ಯಾನಿಧಿ ರದ್ದುಗೊಳಿಸಿರುವುದು ಖಂಡನೀಯ ಎಂದು ಆಕ್ರೋಶ ವ್ಯಕ್ತಪಡಿಸಿ, ಸರಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ತಮ್ಮ ಅಕ್ರೋಶ ವ್ಯಕ್ತಪಡಿಸಿದರು. ನಂತರ ಸ್ಥಳಕ್ಕೆ ಆಗಮಿಸಿದ ತಹಸೀಲ್ದಾರ ಧನಂಜಯ ಎಂ ಅವರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಎಬಿವಿಪಿ ಸಹ ಕಾರ್ಯದರ್ಶಿ ವಿನಯ್ ಸಪಡ್ಲ, ಯಶ್ವಂತ್ ಶಿರಹಟ್ಟಿ ಮನೋಜ್ ತಂಡಗೇರ, ವಿನಾಯಕ ಕುಂಬಾರ, ಅಭಿಷೇಕ್ ಈಸನಗೌಡರ, ವಿನಾಯಕ ಹುಂಬಿ, ಅರವಿಂದ ಇಚ್ಚಂಗಿ, ಯುವರಾಜ್ ದುರ್ಗದ, ಈರಣ್ಣ ಕುಂಬಾರ ಸಂಜನಾ, ರತ್ನಾ, ರಕ್ಷಿತಾ ಸವಿತಾ, ಅನುಪಮಾ, ಗೀತಾ, ತೇಜಸ್ವಿನಿ, ಅನುಷಾ ಸೇರಿದಂತೆ ವಿವಿಧ ಕಾಲೇಜಿನ ವಿದ್ಯಾರ್ಥಿಗಳು ಇದ್ದರು. ಸಿಪಿಐ ನಾಗರಾಜ ಮಾಡಳ್ಳಿ, ಪಿಎಸ್‌ಐ ನಾಗರಾಜ ಗಡಾದ, ಕ್ರೈಂ ಪಿಎಸ್‌ಐ ಟಿ.ಕೆ. ರಾಠೋಡ ನೇತೃತ್ವದಲ್ಲಿ ಪೊಲೀಸರು ಸೂಕ್ತ ಬಂದೋಬಸ್ತ್ ನೀಡಿದ್ದರು.

## ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2025–26ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯಿಂದ ಜಿಲ್ಲೆಯ ಪರಿಶಿಷ್ಟ ಜಾತಿಯ ಹಾಗೂ ಪರಿಶಿಷ್ಟ ಪಂಗಡಗಳ ಕಾನೂನು ಪದವೀಧರರಿಗೆ ವೃತ್ತಿ ತರಬೇತಿ ಅವಧಿಯಲ್ಲಿ ಶಿಷ್ಯವೇತನ ಪಾವತಿಸುವ ಕಾರ್ಯಕ್ರಮದಡಿ ಅರ್ಹ ಕಾನೂನು ಪದವೀಧರರನ್ನು ಆಯ್ಕೆ ಮಾಡಲು ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅಭ್ಯರ್ಥಿಯು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಾಗಿರಬೇಕು. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ದಿನಾಂಕಕ್ಕೆ 2 ವರ್ಷದ ಒಳಗೆ ಕಾನೂನು ಪದವಿ ಹೊಂದಿರಬೇಕು. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕಕ್ಕೆ ಅಭ್ಯರ್ಥಿಯ ವಯಸ್ಸು 40 ವರ್ಷ ಮೀರಿರಬಾರದು. ಅಭ್ಯರ್ಥಿಯ ವಾರ್ಷಿಕ ಆದಾಯ ಮಿತಿ ರೂ. 2.00 ಲಕ್ಷಕ್ಕೆ ಮೀರಿರಬಾರದು. ಅಭ್ಯರ್ಥಿಯು ಬಾರ್ ಕೌನ್ಸಿಲ್‌ದಲ್ಲಿ ಹೆಸರನ್ನು ನೊಂದಾಯಿಸಿರಬೇಕು.

ತರಬೇತಿಯ ಅವಧಿಯು 2 ವರ್ಷಗಳಾಗಿದ್ದು, ಆಯ್ಕೆಯಾದ ಅಭ್ಯರ್ಥಿಗಳು ತರಬೇತಿಯನ್ನು ಮಧ್ಯದಲ್ಲಿ ಬಿಡುವುದಿಲ್ಲವೆಂದು ಹಾಗೂ ಒಂದು ವೇಳೆ ಮಧ್ಯದಲ್ಲಿ ಬಿಟ್ಟರೆ ತರಬೇತಿಯ ಅವಧಿಯಲ್ಲಿ ಪಡೆದ ಶಿಷ್ಯವೇತನವನ್ನು ಶೇ. 10 ರ ಬಡ್ಡಿಯೊಂದಿಗೆ ಸರ್ಕಾರಕ್ಕೆ ಹಿಂತಿರುಗಿಸುವುದಾಗಿ ಮುಚ್ಚಳಿಕೆ ಬರೆದುಕೊಡತಕ್ಕದ್ದು. ಈ ನಿಯಮ ರಾಜ್ಯ ಅಥವಾ ಕೇಂದ್ರ ಸರ್ಕಾರದಲ್ಲಿ ನೌಕರಿ ದೊರೆತು ಮಧ್ಯದಲ್ಲಿ ಬಿಟ್ಟು ಹೋಗುವವರಿಗೆ ಅನ್ವಯಿಸುವುದಿಲ್ಲ. ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ಹಾಕಲು ದಿ : 01–07–2025 ವರ್ಷದ ಎಲ್ಲಾ ದಿನಗಳು (365 DAYS ಅವಕಾಶ ಇರುತ್ತದೆ. ಆನ್‌ಲೈನ್‌ನಲ್ಲಿ ಸಲ್ಲಿಸಿದ ಅರ್ಜಿಯನ್ನು ಅಂತಿಮ ವರ್ಷದ ಕಾನೂನು ಪದವಿಯ ಅಂಕಪಟ್ಟಿ, ಜಾತಿ ಪ್ರಮಾಣ ಪತ್ರ, ಆದಾಯ ಪ್ರಮಾಣ ಪತ್ರ, ಬಾರ್ ಕೌನ್ಸಿಲ್‌ನಲ್ಲಿ ಹೆಸರು ನೋಂದಣಿ ಪ್ರಮಾಣ ಪತ್ರಗಳ ಝೆರಾಕ್ಸ್ ಪ್ರತಿಗಳಿಗೆ ಗೆಜೆಟೆಡ್ ಅಧಿಕಾರಿಗಳಿಂದ ದೃಢೀಕರಿಸಿ ಅರ್ಜಿಯನ್ನು ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಜಿಲ್ಲಾ ಆಡಳಿತ ಭವನ, ರೂಮ್ ನಂ–107, ಮೊದಲನೆ ಮಹಡಿ, ಗದಗ ಇವರಿಗೆ ಸಲ್ಲಿಸಬೇಕು.

**ಅರ್ಜಿ ಸಲ್ಲಿಸಲು ಆನ್‌ಲೈನ್ ವಿಳಾಸ:** swdservices.karnataka.gov.in/swincentive/LAW?LAWHome.aspx ( SC Online Application, Stipend to LAW Graduation ) twd.karnataka.gov.in/twicentive/LAW/LAWHome.aspx. ( ST Online Application, Stipend to LAW Graduation )

## ಉತ್ತಮ ಸೇವೆ ಸಲ್ಲಿಸಿದ ಹಿರಿಯ ನಾಗರಿಕರ ರಾಜ್ಯ ಪ್ರಶಸ್ತಿಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶದನ್ವಯ ದಿನಾಂಕ:01/10/2025 ರಂದು ವಿಶ್ವ ಹಿರಿಯ ನಾಗರಿಕರ ದಿನಾಚರಣೆಯನ್ನು ರಾಜ್ಯಮಟ್ಟದಲ್ಲಿ ಆಚರಿಸುವ ಸಂದರ್ಭದಲ್ಲಿ ಹಿರಿಯ ನಾಗರಿಕರ ವಿವಿಧ ಕ್ಷೇತ್ರಗಳಾದ ಶಿಕ್ಷಣ ಕ್ಷೇತ್ರ, ಸಾಹಿತ್ಯ ಕ್ಷೇತ್ರ, ಕಲೆ, ಕಾನೂನು, ಪ್ರತಿಭೆ/ಕ್ರೀಡೆ ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಸಮಾಜ ಸೇವೆ ಗಣನೀಯ ಸೇವೆ ಸಲ್ಲಿಸಿದ ಹಿರಿಯ ▶▶3ನೇ ಪುಟಕ್ಕೆ

## ನೂತನ ಎಸ್ ಪಿ ರೋಹನ್ ಜಗದೀಶ್‌ಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಸ್ಥಳೀಯ ಎಸ್.ಎಮ್.ಕೃಷ್ಣಾ ನಗರದ ನೇ ವಾರ್ಡ್ ನಗರಸಭಾ ಸದಸ್ಯರಾದ ಶ್ರೀಮತಿ ಲಕ್ಷ್ಮೀ ಅನಿಲಕುಮಾರ ಸಿದ್ದಮ್ಮನಹಳ್ಳಿ ನೇತೃತ್ವದಲ್ಲಿ ಸ್ಥಳೀಯರು ಸೇರಿ ಗದಗ ಜಿಲ್ಲೆಗೆ ನೂತನವಾಗಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾಗಿ ಅಧಿಕಾರ ವಹಿಸಿಕೊಂಡ ರೋಹನ್ ಜಗದೀಶ್ ಅವರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಮುಖಂಡರಾದ ಬಸವರಾಜ್ ಕಡೇಮನಿ, ವಸಂತ ಪರಸಪ್ಪ ಸಿದ್ದಮ್ಮನಹಳ್ಳಿ, ಅನಿಲಕುಮಾರ ಪರಸಪ್ಪ ಸಿದ್ದಮ್ಮನಹಳ್ಳಿ, ಸೋಮನಗೌಡ ಪಾಟೀಲ್, ಎಲ್. ಎಫ್.ಮುಲ್ಲಾನವರ, ಹೊಳಬಸಪ್ಪ ಅಕ್ಕಿ, ದುದ್ದುಗೌಡ ಪಾಟೀಲ್, ಶೇಖರ ಅಂದಾನಪ್ಪ ರಾಟಿ, ಫಾರೂಕ ಬಾರಿಗಿಡದ, ಮುತ್ತಣ್ಣ ನಿಲ್ಲೂಗಲ್, ರಾಮು ಬಾಗಲಕೋಟ, ಸಿದ್ದಣ್ಣ ಹೊಸಳ್ಳಿ, ನವೀದ್ ಸಿದ್ದಾಪುರ, ಸಲ್ಲಿಂ ಬೊದ್ಲೆಖಾನ, ಶ್ರೀಮತಿ ಗಾಯತ್ರಿ ವಸಂತ ಸಿದ್ದಮ್ಮನಹಳ್ಳಿ ಉಪಸ್ಥಿತರಿದ್ದರು.

## ಜು. 28 ರಿಂದ 30 ರವರೆಗೆ ಮೂಲ ದಾಖಲಾತಿಯ ಪರಿಶೀಲನೆ

■ವಿಜಯಸಾಕ್ಷಿ ಸುದ್ದಿ, ಗದಗ

ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ರಾಜ್ಯ ಮಟ್ಟದ ಮಾನವ ಸಂಪನ್ಮೂಲ ಖಠರಿ –2025–26 ಅನುಮೋದನೆಯಂತೆ ಎನ್.ವಿ.ಬಿ.ಡಿ.ಸಿ.ಪಿ ಕಾರ್ಯಕ್ರಮದಡಿಯಲ್ಲಿ 01 ಕೀಟ ಸಂಗ್ರಹಕಾರ ( Insect collector ) ಹುದ್ದೆ ಅನುಮೋದನೆಯಾಗಿದ್ದು. ಸದರಿ ಹುದ್ದೆಯನ್ನು ಮೆರಿಟ್ ಆಧರಿಸಿ ನಿಬಂಧನೆಗೊಳಪಟ್ಟು ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. ಅಪ್ಲೋಡ್ ಆಗಿರುವ ಅರ್ಜಿಗಳಿಗೆ ಮೆರಿಟ್ ಆಧಾರದ ಮೇಲೆ ತಯಾರಿಸಿದ 01:10 ಅನುಪಾತದಲ್ಲಿನ ಅಭ್ಯರ್ಥಿಗಳನ್ನು ▶▶3ನೇ ಪುಟಕ್ಕೆ

### ಸಚಿವ ಸಂಪುಟಸಭೆಯಲ್ಲಿ ಹಲವು ಪ್ರಮುಖ ನಿರ್ಣಯಗಳಿಗೆ ಅಂಗೀಕಾರ

# ಸವದತ್ತಿ ಯಲ್ಲಮ್ಮ ಗುಡ್ಡ ಅಭಿವೃದ್ಧಿಗೆ ಅಸ್ತು

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಗುರುವಾರ ನಡೆದ ಸಚಿವ ಸಂಪುಟಸಭೆಯಲ್ಲಿ ಹಲವು ಪ್ರಮುಖ ನಿರ್ಣಯಗಳನ್ನು ಅಂಗೀಕರಿಸಲಾಯಿತು.

ಕರ್ನಾಟಕ ರಾಜ್ಯ ಖಾಸಗಿ ವೈದ್ಯಕೀಯ ಸಂಸ್ಥೆಗಳ (ತಿದ್ದುಪಡಿ) ವಿಧೇಯಕ, 2025ಕ್ಕೆ ಅನುಮೋದನೆ ನೀಡಲಾಯಿತು. ಸಾರ್ವಜನಿಕ ಆರೋಗ್ಯ ಸಂಸ್ಥೆಗಳ ಬೇಡಿಕೆಗಳಿಗನುಸಾರವಾಗಿ 890 ಔಷಧಗಳು, ಉಪಭೋಗ್ಯ ವಸ್ತುಗಳು ಹಾಗೂ ರಾಸಾಯನಿಕಗಳನ್ನು ರೂ.880.68 ಕೋಟಿಗಳ ಅಂದಾಜು ವೆಚ್ಚದಲ್ಲಿ ಕೆಟಿಪಿಪಿ ಕಾಯ್ದೆ 1999 ಹಾಗೂ ಕೆಟಿಪಿಪಿ ನಿಯಮ 2000ಗಳನ್ನು ಅನುಸರಿಸಿ ಟೆಂಡರ್ ಮೂಲಕ ಸಂಗ್ರಹಿಸಿ ಸರಬರಾಜು ಮಾಡಲು ಹಾಗೂ ಅಗತ್ಯವಿರುವ



ಅನುದಾನವನ್ನು ಒದಗಿಸಲು ಸಚಿವ ಸಂಪುಟ ನಿರ್ಧರಿಸಿತು.

ರಾಜ್ಯದ ವಿವಿಧ ಕಾರಾಗೃಹಗಳಲ್ಲಿರುವ 46 ಜೀವಾವಧಿ ಶಿಕ್ಷಾ ಬಂಧಿಗಳನ್ನು ಸನ್ನಡತೆಯ ಆಧಾರದ ಮೇಲೆ ಅವಧಿಪೂರ್ವ ಬಿಡುಗಡೆಗೊಳಿಸಲು ಹಾಗೂ ರಾಜ್ಯದ ವಿವಿಧ ಕಾರಾಗೃಹಗಳಲ್ಲಿರುವ 3 ಶಿಕ್ಷಾ ಬಂಧಿಗಳನ್ನು ಕೇಂದ್ರ ಗೃಹ ಮಂತ್ರಾಲಯದ ಸಹಮತಿ ದೊರೆಕಿದ ನಂತರ ಭಾರತ ಸಂವಿಧಾನದ ಅನುಚ್ಛೇದ–161ರ ಪ್ರಕಾರ ಅವಧಿಪೂರ್ವ ಬಿಡುಗಡೆಗೊಳಿಸಲು ಸಚಿವ ಸಂಪುಟ ನಿರ್ಣಯಿಸಿತು.

ರಂಗಶಂಕರ ಸಂಸ್ಥೆ ಗುತ್ತಿಗೆ ವಿಸ್ತರಣೆ, ಅಲ್ಲೀಪುರ ಗ್ರಾಮ ಪಂಚಾಯಿತಿ ಪಟ್ಟಣ ಪಂಚಾಯಿತಿಯಾಗಿ ಮೇಲ್ದರ್ಜೆಗೆ, ಮಂಡ್ಯ ಜಿಲ್ಲೆಯ ಮದ್ದೂರು ತಾಲ್ಲೂಕಿನ ಸೂಳೆಕೆರೆಯ ಜೀರ್ಣೋದ್ಧಾರ, ಮದಗ–ಮಾಸೂರು ಕೆರೆ ಆಧುನೀಕರಣ, ನಂಜಾಪುರ ಏತ ನೀರಾವರಿ ಆಧುನೀಕರಣ, 18 ಕೆರೆಗಳಿಗೆ ನೀರು ತುಂಬಿಸುವ ಯೋಜನೆಗೆ ಅನುಮೋದನೆ, ಬಾಲ್ಯವಿವಾಹ ನಿಷೇಧ (ಕರ್ನಾಟಕ ತಿದ್ದುಪಡಿ) ವಿಧೇಯಕ, 2025ಕ್ಕೆ ಅನುಮೋದನೆ, 215.37 ಕೋಟಿ ರೂ.ಗಳ ವೆಚ್ಚದಲ್ಲಿ ಸವದತ್ತಿ ಯಲ್ಲಮ್ಮ ಗುಡ್ಡ ಅಭಿವೃದ್ಧಿ, ಡಿ.ಕುನ್ಹಾ ವರದಿ ಅಂಗೀಕಾರ, ಹಾವೇರಿ ಜಿಲ್ಲೆ, ರಟ್ಟಿಹಳ್ಳಿ ತಾಲೂಕು ಮದಗ–ಮಾಸೂರು ಕೆರೆಯ ಎಡದಂಡೆ ಹಾಗೂ ಬಲದಂಡೆ ಮುಖ್ಯ ನಾಲೆಗಳ ಆಧುನೀಕರಣ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ಸೇರಿದಂತೆ ಇನ್ನೂ ಹಲವು ಯೋಜನೆಗಳಿಗೆ ಸಚಿವ ಸಂಪುಟ ಒಪ್ಪಿಗೆ ಸೂಚಿಸಿತು.

> ಅಗ್ನಿಶಾಮಕ ಇಲಾಖೆಯ ಕಾರ್ಯಕ್ಷಮತೆಯನ್ನು ಹೆಚ್ಚಿಸಲು ಮೊದಲು Karnataka Fire Force Act, 1964ರ ಕಲಂ 15ಕ್ಕೆ ತಿದ್ದುಪಡಿ ತಂದು ನಂತರ ರಾಜ್ಯದಲ್ಲಿ ಹೊಸದಾಗಿ ನಿರ್ಮಾಣವಾಗುವ ಬಹುಮಹಡಿ ಕಟ್ಟಡಗಳ ಆಸ್ತಿ ತೆರಿಗೆಯೊಂದಿಗೆ ಶೇ.1ರ ದರದಲ್ಲಿ ಈಡಿಜ ಅಝ ಅನ್ನು ವಿಧಿಸಲು ಕ್ರಮವಹಿಸಲು ಪ್ರಸ್ತಾಪಿಸಲಾಯಿತು.

## ಸಂಪಾದಕೀಯ

# ಮಹದಾಯಿ ವಿಚಾರ: ಡಿಕೆಶಿ ಗುಡುಗು ಬದ್ಧತೆಯ ಪ್ರತೀಕ

ಮಹದಾಯಿ ಕುಡಿಯುವ ನೀರಿನ ಯೋಜನೆಗೆ ಕೇಂದ್ರ ಅರಣ್ಯ ಇಲಾಖೆ ಅನುಮತಿ ನೀಡುವುದಿಲ್ಲ ಎಂಬ ಗೋವಾ ಮುಖ್ಯಮಂತ್ರಿ ಪ್ರಮೋದ್ ಸಾವಂತ್ ಅವರ ಹೇಳಿಕೆ ಕರ್ನಾಟಕದಲ್ಲಿ ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಗೋವಾ ನಡೆ ಖಂಡಿಸಿ ಹೋರಾಟಕ್ಕೆ ಇಳಿಯುವುದಾಗಿ ಎಚ್ಚರಿಕೆ ನೀಡಿದ್ದಾರೆ.

ಇನ್ನೊಂದೆಡೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಾವಂತ್ ಹೇಳಿಕೆಯನ್ನು ಖಂಡಿಸಿ, ತಕ್ಷಣವೇ ಸುಪ್ರೀಂ ಕೋರ್ಟ್‌ನಲ್ಲಿ ಸಲ್ಲಿಸಿರುವ ಅರ್ಜಿಗಳನ್ನು ಹಿಂಪಡೆದು ಕಾಮಗಾರಿಯನ್ನು ಪ್ರಾರಂಭಿಸುವುದಾಗಿ ಗುಡುಗಿದ್ದಾರೆ. ಕಾಮಗಾರಿ ತಡೆಯಲಿ, ನಾನೂ ನೋಡುತ್ತೇನೆ ಎಂದು ಡಿಕೆಶಿ ಹಾಕಿರುವ ಸವಾಲು, ಕರ್ನಾಟಕದ ಬದ್ಧತೆಯನ್ನು ಎತ್ತಿ ತೋರಿಸುತ್ತದೆ.

ಮಹದಾಯಿ ಯೋಜನೆ ಕರ್ನಾಟಕದ ಜೀವನಾಡಿ. ಇದು ಉತ್ತರ ಕರ್ನಾಟಕದ ಬರಪೀಡಿತ ಪ್ರದೇಶಗಳಿಗೆ ಕುಡಿಯುವ ನೀರು ಒದಗಿಸುವ ಮಹತ್ವದ ಯೋಜನೆಯಾಗಿದೆ. ಸುದೀರ್ಘ ಕಾನೂನು ಹೋರಾಟದ ನಂತರವೂ ಯೋಜನೆ ನನೆಗುದಿಗೆ ಬಿದ್ದಿರುವುದು ದುರದೃಷ್ಟಕರ.

ಗೋವಾದ ನಿರಂತರ ವಿರೋಧ ಮತ್ತು ರಾಜಕೀಯ ತಂತ್ರಗಳು ಈ ಪ್ರದೇಶದ ಜನರ ಸಂಕಷ್ಟವನ್ನು ಹೆಚ್ಚಿಸಿವೆ.

ಕೇಂದ್ರ ಸರ್ಕಾರದ ಅರಣ್ಯ ಇಲಾಖೆ ಅನುಮತಿ ನೀಡದಿರುವ ಬಗ್ಗೆ ಗೋವಾ ಮುಖ್ಯಮಂತ್ರಿಗಳು ನೀಡಿದ ಹೇಳಿಕೆಗಳು ಕೇಂದ್ರದ ಮೇಲೆ ಪ್ರಭಾವ ಬೀರಲು ಪ್ರಯತ್ನಿಸುತ್ತಿರುವುದನ್ನು ಸೂಚಿಸುತ್ತವೆ.

ಇದು ಪ್ರಜಾತಂತ್ರ ವ್ಯವಸ್ಥೆಯಲ್ಲಿ ಅನುಚಿತ ಹಸ್ತಕ್ಷೇಪದಂತೆ ತೋರುತ್ತದೆ. ರಾಜ್ಯಗಳ ನಡುವಿನ ವಿವಾದಗಳನ್ನು ಸೌಹಾರ್ದಯುತವಾಗಿ ಪರಿಹರಿಸಬೇಕೇ ಹೊರತು, ರಾಜಕೀಯವಾಗಿ ಇತ್ಯರ್ಥಪಡಿಸುವುದು ಸರಿಯಲ್ಲ.

ಡಿಕೆ ಶಿವಕುಮಾರ್ ಅವರ ನಿರ್ಧಾರ ಸ್ವಾಗತಾರ್ಹ.

ಸುಪ್ರೀಂ ಕೋರ್ಟ್ ಮೊರೆ ಹೋಗುವುದರಿಂದ ಸಮಯ ವ್ಯರ್ಥವಾಗುತ್ತಿದ್ದು, ಯೋಜನೆಯ ಅನುಷ್ಠಾನಕ್ಕೆ ಮತ್ತಷ್ಟು ವಿಳಂಬವಾಗುತ್ತಿದೆ. ಇನ್ನು ಕಾಲಹರಣ ಮಾಡದೆ, ಜನರ ಹಿತದೃಷ್ಟಿಯಿಂದ ಕಾಮಗಾರಿ ಆರಂಭಿಸುವುದು ಅನಿವಾರ್ಯ.

ಈ ಹಂತದಲ್ಲಿ, ಕೇಂದ್ರ ಸರ್ಕಾರ ಕರ್ನಾಟಕಕ್ಕೆ ಬೆಂಬಲವಾಗಿ ನಿಲ್ಲಬೇಕು ಮತ್ತು ಯೋಜನೆಯ ತ್ವರಿತ ಅನುಷ್ಠಾನಕ್ಕೆ ಅಗತ್ಯ ಅನುಮತಿಗಳನ್ನು ಒದಗಿಸಬೇಕು. ರಾಜ್ಯದ ಜನರು ಈ ಯೋಜನೆಯನ್ನು ಕುತೂಹಲದಿಂದ ಎದುರು ನೋಡುತ್ತಿದ್ದಾರೆ. ಗೋವಾದ ರಾಜಕೀಯಕ್ಕೆ ಮಣಿಯದೆ, ಕರ್ನಾಟಕ ತನ್ನ ಜನರ ಹಕ್ಕಿಗಾಗಿ ನಿಲ್ಲಬೇಕು.

### ನೆಚ್ಚಿನ ಗುರುಮಾತೆ ಕವಿತಾ ಕಾಶಪ್ಪನವರರನ್ನು ನೆನೆದು ಅಕ್ಷರ ನಮನ

# ಜೀವನೋತ್ಸಾಹದ ಚಿಲುಮೆ ಕವಿತಾ ಕಾಶಪ್ಪನವರ

ಮೋಡಿ ಮಾಡುವ ವಾಕ್ಚಾತುರ್ಯ, ಸದಾ ನಗುಮೊಗದ ಹಾಸ್ಯಗಾರ್ತಿ, ವರ್ಗ ಕೋಣೆಯಲ್ಲಿ ವಿದ್ಯಾರ್ಥಿಗಳ ಅಚ್ಚುಮೆಚ್ಚಿನ ಉಪನ್ಯಾಸಕಿ, ಪ್ರವೃತ್ತಿಯಿಂದ ಸದಾ ಕ್ರಿಯಾಶೀಲ ಚಟುವಟಿಕೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡ ಸೃಜನಶೀಲೆ, ಹವ್ಯಾಸಿ ರಂಗನಟಿಯಾಗಿ ಎಲ್ಲರದೆಯಲ್ಲಿ ನೆನಪುಗಳ ಭಾವ ಬಿತ್ತಿದ ನಾಯಕಿ, ಬಹುಮುಖ ವ್ಯಕ್ತಿತ್ವದ ನನ್ನ ನೆಚ್ಚಿನ ಗುರುಮಾತೆ ಕವಿತಾ ಕಾಶಪ್ಪನವರ.



ವಿದ್ಯೆ ಕಲಿಸಿದ ಗುರು ಎಂದೆಂದಿಗೂ ಭಗವಂತನ ಸಮಾನ. ಗುರುವಿಗೆ ಹುಟ್ಟು-ಸಾವು ಎಂಬುದೇ ಇಲ್ಲ. ಆದರೂ ಭೌತಿಕ ಪ್ರಪಂಚದ ವಿದಾಯ ಎಲ್ಲರಿಗೂ ಅನಿವಾರ್ಯ. ಆದರೆ ಬದುಕಿದಷ್ಟು ದಿನಗಳು, ಕ್ಷಣಗಳನ್ನು ಅಷ್ಟೇ ಸಂತೋಷಮಯವಾಗಿ, ಲವಲವಿಕೆಯಿಂದ, ಅರ್ಥಪೂರ್ಣ ಬದುಕನ್ನು ನಿರ್ವಹಿಸಿದವರು ವಿರಳ. ಇಂತಹ ವಿರಳ ವ್ಯಕ್ತಿತ್ವದವರಲ್ಲಿ ಕವಿತಾ ಕಾಶಪ್ಪನವರ ಸಹ ಒಬ್ಬರು. ಇವರಲ್ಲಿದ್ದ ಜೀವನೋತ್ಸಾಹ ಎಲ್ಲರಿಗೂ ಮಾದರಿ. ಇಂತಹ ಅಪರೂಪದ ಕಾವ್ಯಮಯ ಬದುಕಿನ ಒಡತಿ ಕವಿತಾ ಅವರ ಶಿಷ್ಯೆಯಾಗಿ ಕಲಿಯುವ ಅವಕಾಶ ನನಗೊದಗಿದ್ದು ನನ್ನ ಸುದೈವ.

ವಿಷಯ ಬೋಧನೆಯಲ್ಲಿ ತಿಳಿಹಾಸ್ಯ ಚಟಾಕಿ ಇವರ ವೈಶಿಷ್ಟ್ಯ. ಜೊತೆಗೆ ಬದುಕಿನ ಮೌಲ್ಯಯುತ ಪಾಠಗಳನ್ನು, ವಾಸ್ತವ ಚಿತ್ರಣವನ್ನು ಕಣ್ಮುಂದೆ ಕಟ್ಟುವಂತೆ ಮನೋಜ್ಞವಾಗಿ ಹೇಳುತ್ತಿದ್ದ ಇವರ ಬೋಧನಾಶೈಲಿ ಎಲ್ಲರ ಮನಸ್ಸಿಗೆ ಹಿಡಿಸುವಂತಿತ್ತು. ವಿಷಯವನ್ನು ಸರಳೀಕರಿಸಿ ಹೇಳುವ ತಂತ್ರಗಾರಿಕೆ ಇವರಲ್ಲಿತ್ತು. ವಿದ್ಯಾರ್ಥಿಗಳ ಮುಖದಲ್ಲಿ ನಗುವನ್ನು ಮೂಡಿಸುವ ಕೌಶಲ ಇವರಲ್ಲಿ ಕರಗತವಾಗಿತ್ತು. ಅಷ್ಟೇ ಗಂಭೀರ ವದನೆಯಾಗಿ ಕೆಲವು ಸಂದರ್ಭಗಳನ್ನು ನಿಭಾಯಿಸುವ ಚಾಕಚಕ್ಯತೆ ಇವರಲ್ಲಿತ್ತು.

ಸುಮಾರು 23 ವರ್ಷಗಳ ಹಿಂದೆ ಪಿಯುಸಿ ಓದುವಾಗ ಇವರನ್ನು ಮೊಟ್ಟಮೊದಲಿಗೆ ನೋಡಿದಾಗ ಅದೇನೋ ಒಂದು ಜೀವನದ ಉತ್ಸಾಹ ನನ್ನಲ್ಲೂ ಚಿಗುರೊಡೆಯಿತು. ವಿದ್ಯಾರ್ಥಿನಿಯರಿಗಂತೂ ಇವರು ಆಗಾಗ ಹೇಳುತ್ತಿದ್ದ ಕಿವಿಮಾತುಗಳು, ಎಚ್ಚರಿಕೆಯ ವಾಸ್ತವ ವಿಚಾರಗಳು ಅದೆಷ್ಟೋ ವಿದ್ಯಾರ್ಥಿನಿಯರ ಪಾಲಿಗೆ ಆಶಾ ಕಿರಣವಾಗಿತ್ತು. ನೋಡಮ್ಮ, ಎಲ್ಲಾ ಹೆಣ್ಣು ಮಕ್ಕಳು ನೀವು ಜೀವನದಲ್ಲಿ ಆರ್ಥಿಕವಾಗಿ, ಸಾಮಾಜಿಕವಾಗಿ, ಕೌಟುಂಬಿಕವಾಗಿ ಸಬಲರಾಗಬೇಕಾದರೆ, ನಿಮ್ಮ ಬದು-ಕಿಗೊಂದು ಅರ್ಥ ಬರಬೇಕಾದರೆ ನಿಮ್ಮ ಕಾಲ ಮೇಲೆ ನೀವು ನಿಲ್ಲುವವರೆಗೂ ವಿದ್ಯಾಭ್ಯಾಸ ಮುಂದುವರಿಸಬೇಕು. ನಮ್ಮ ಜೀವನದ ಖರ್ಚು-ವೆಚ್ಚಗಳನ್ನು ನಾವೇ ನಿಭಾಯಿಸಬೇಕು. ಹತ್ತು ರೂಪಾಯಿ ಕೊಡು, ನೂರು ರೂಪಾಯಿ ಕೊಡು ಎಂದು ಗಂಡು ಮಕ್ಕಳ ಮುಂದೆ ಕೈಚಾಚುವ ಸಂದರ್ಭ ಬರಬಾರದು ಎನ್ನುತ್ತಿದ್ದ ಅವರ ಮಾತುಗಳು ಮಹಿಳಾ ಆರ್ಥಿಕ ಸಬಲತೆಗೆ ಹಿಡಿದ ಕೈಗನ್ನಡಿಯಂತಿವೆ.

ಅಂದು ಗದಗ ನಗರದಲ್ಲಿ ದಂಡಿನರವರ ಕೆವಿಎಸ್‌ಆರ್ ಹಾಗೂ ಕೆಎಸ್‌ಎಸ್ ಕಾಲೇಜ್ ಎಂದರೆ ಅದೊಂದು ಬ್ರಾಂಡ್ ಕ್ರಿಯೇಟ್ ಮಾಡಿದ ಸಂಸ್ಥೆ. ಪಾಂಡಿತ್ಯದ ಮಹಾಪೂರವೇ ಆ ಸಂಸ್ಥೆಯಲ್ಲಿತ್ತು. ಹಾಗಾಗಿ ನಗರ ಪ್ರದೇಶದ ಸುತ್ತಲಿನ ಗ್ರಾಮೀಣ ಭಾಗದಿಂದ ವಿದ್ಯಾರ್ಥಿಗಳ ಸಮೂಹವೇ ದಂಡಿನ ಸಂಸ್ಥೆಯ ಕ್ಯಾಂಪಸ್‌ನಲ್ಲಿರುತ್ತಿತ್ತು. ಆ ಇಮೇಜ್‌ಗೆ ಕಾರಣವೇ ಆ ಸಂಸ್ಥೆಯಲ್ಲಿ ಬೋಧಿಸುತ್ತಿದ್ದ ಅಪರೂಪ ವ್ಯಕ್ತಿತ್ವವುಳ್ಳ ಉಪನ್ಯಾಸಕ ವರ್ಗ. ಒಬ್ಬರಿಗಿಂತ ಮತ್ತೊಬ್ಬರು ವಿಶೇಷವೇ. ಅವರಲ್ಲಿದ್ದ ಜ್ಞಾನ ಪಾಂಡಿತ್ಯ, ವಿದ್ಯಾರ್ಥಿಗಳ ಏಳಿಗೆಗೆ ಅವರು ಶ್ರಮಿಸುತ್ತಿದ್ದ ರೀತಿ ಎಲ್ಲವೂ ಇಂದಿಗೂ ಮಾದರಿ.

ಅಂತಹ ಪವಿತ್ರವಾದ ವೃತ್ತಿಯಲ್ಲಿ ತಮ್ಮನ್ನು ತಾವು ಕ್ರಿಯಾಶೀಲವಾಗಿ ತೊಡಗಿಸಿಕೊಂಡು ವಿದ್ಯಾರ್ಥಿಗಳ ಪಾಲಿಗೆ ತಿದ್ದಿ ಬುದ್ಧಿ ಹೇಳುವ ತಾಯಿಯಾಗಿ ಕವಿತಾ ಅವರು ನೀಡಿದ ಮೌಲ್ಯಯುತ ವಿಚಾರಗಳನ್ನು ಮರೆಯುವಂತಿಲ್ಲ. ಅವರೊಬ್ಬ ಮಹಿಳಾ ನಾಯಕಿ. ಹಾಗೆಯೇ ಬದುಕಿದವರು ಕೂಡ. ನಾನು ಕೂಡ ಗದಗ ಪರಿಸರದಲ್ಲಿಯೇ ಹುಟ್ಟಿ ಬೆಳೆದು ವೃತ್ತಿ ಪ್ರವೃತ್ತಿಯಿಂದ ಇಲ್ಲಿಯೇ ನೆಲೆ ಕಂಡುಕೊಂಡಾಗ ತಮ್ಮ ಕೈಯಲ್ಲಿ ಕಲಿತ ವಿದ್ಯಾರ್ಥಿನಿಯ ಮುನ್ನಡೆಯನ್ನು ಕಂಡು ಮನಸ್ಸಿನಲ್ಲಿ ಹಿರಿಹಿರಿ ಹಿಗ್ಗಿದವರು. ಜೊತೆಗೆ ಮನಸಾರೆ ಹಾರೈಸಿದವರು.

ಇತ್ತೀಚಿಗಂತೂ ನೆನಪಾದಗೊಮ್ಮೆ ಫೋನ್ ಕರೆ ಮಾಡಿ ತಮ್ಮ ವೃತ್ತಿ ಬದುಕಿನ ಕೆಲವು ಸಂದರ್ಭಗಳನ್ನು ಹಾಗೂ ಇತ್ತೀಚಿನ ಬದಲಾವಣೆಗಳನ್ನು ಹಂಚಿಕೊಳ್ಳುತ್ತಿದ್ದರು. ನಿವೃತ್ತಿಯ ನಂತರ ತಮ್ಮ ಕುಟುಂಬದ ಜೊತೆಗೆ ಕಳೆಯುವ ಕ್ಷಣಗಳನ್ನು, ಮಕ್ಕಳು, ಮೊಮ್ಮಕ್ಕಳನ್ನು ನೆನೆದು ಸಂತಸ ಪಡುತ್ತಿದ್ದರು. ಅವರ ವಿದ್ಯಾರ್ಥಿನಿಯಾಗಿ ಅವರಲ್ಲಿದ್ದ ಸಕಾರಾತ್ಮಕ ವಿಚಾರಗಳನ್ನು ಒಡನಾಟವನ್ನು ಅಷ್ಟೇ ನಾನು ದಾಖಲಿಸಬಲ್ಲೆ. ನಾನು ಕೂಡ ಶಿಕ್ಷಣ ಶಾಸ್ತ್ರದ ಉಪನ್ಯಾಸಕಿಯಾಗಿ ವೃತ್ತಿ ನಿರ್ವಹಿಸುವಾಗ ತುಂಬಾ ಸಂತಸಪಟ್ಟರು. ನನ್ನ ಹಲವು ಸಮಾಜಮುಖಿ ಸಂಘಟನಾತ್ಮಕ ಕಾರ್ಯಗಳನ್ನು ಕಂಡು ಅಭಿನಂದಿಸಿದರು ಕೂಡ.

ಇಷ್ಟು ಬೇಗ ನಮ್ಮನ್ನು ಅಗಲುವ ವಯಸ್ಸು ಸಹ ಅವರದಲ್ಲ. ಕೇವಲ 65ರ ವಯಸ್ಸಿನಲ್ಲಿ ನಾವ್ಯಾರು ಕೂಡ ನಿರೀಕ್ಷಿಸದ ರೀತಿಯಲ್ಲಿ ನಮ್ಮನ್ನಗಲಿದ್ದಾರೆ. ಅವರಿನ್ನು ನಮ್ಮ ಜೊತೆಗಿದ್ದಾರೆ ಎನ್ನುವ ಭಾವದಲ್ಲಿಯೇ ನಾವಿದ್ದೇವೆ. ಅವರ ಹಾಸ್ಯ, ಅವರ ಮಾತುಗಳು, ಅವರ ಈ ಹಿಂದಿನ ವ್ಯಕ್ತಿತ್ವ, ಒಬ್ಬ ಉಪನ್ಯಾಸಕಿಯಾಗಿ ನಾವು ಕಂಡ ಅವರ ಆ ದಿನದ ಕ್ಷಣಗಳನ್ನು ನಾವು ಮರೆತಿಲ್ಲ.

ಮನುಷ್ಯನ ಭಾವನೆಗಳನ್ನು ಗರಿಗೆದಸಿರುವ ಕವಿತೆಯಂತೆ ಕವಿತಾ ಅವರ ನೆನಪಿನ ಅಂಗಳ ಸದಾ ನಮ್ಮಲ್ಲಿ ಹಚ್ಚಹಸಿರಾಗಿದೆ. ಇಡೀ ವಿದ್ಯಾರ್ಥಿ ಬಳಗದ ಪರವಾಗಿ ಅವರಿಗೆ ಭಾವಪೂರ್ಣ ನಮನಗಳನ್ನು ಸಲ್ಲಿಸುತ್ತೇನೆ.

ಕೊನೆಯದಾಗಿ ತುಸು ಸಲುಗೆಯಿಂದಲೇ ಹೇಳುವುದಾದರೆ ಮಾತೃ ವಾತ್ಸಲ್ಯದ ಕವಿತಾ ಅಮ್ಮ, ನಿಮ್ಮ ಎಲ್ಲ ಒಳ್ಳೆಯ ನೆನಪುಗಳು ನಿಮ್ಮೊಂದಿಗಿವೆ. ರೇಷ್ಮೆ ಸೀರೆಯುಟ್ಟು ನಗುವಿನ ಅಂದಗಾತಿಯಾಗಿ ಬರುತ್ತಿದ್ದರೆ ನಿಮ್ಮನ್ನು ನೋಡುವುದೇ ಒಂದು ಚೆಂದ. ನಿಮ್ಮ ಆ ಒಲವಿನ ಜೀವನವೇ ನಮಗೆಲ್ಲರಿಗೂ ಇಂದು ಉತ್ಸಾಹದ ಚಿಲುಮೆ. ಜೀವನವನ್ನು ಪ್ರೀತಿಯಿಂದ ಪ್ರೀತಿಸಿದ ನಿಮಗೆ ನಮ್ಮದೊಂದು ಸಲಾಂ..... ನಿಮ್ಮ ನೆನಪುಗಳು ನಮ್ಮೊಂದಿಗೆ ಸದಾ ಜೀವಂತ.

**– ಸುಧಾ ಹುಚ್ಚಣ್ಣವರ.**
ಉಪನ್ಯಾಸಕರು, ಗದಗ.

## ಮುಂಬೈ ರೈಲು ಸ್ಫೋಟ: 12 ಅಪರಾಧಿಗಳನ್ನು ಖುಲಾಸೆಗೊಳಿಸಿದ್ದ ಬಾಂಬೆ ಹೈಕೋರ್ಟ್ ಆದೇಶಕ್ಕೆ ಸುಪ್ರೀಂ ಕೋರ್ಟ್ ತಡೆ

**■ವಿಜಯಸಾಕ್ಷಿ ಸುದ್ದಿ, ಮುಂಬೈ**

ಮುಂಬೈ ರೈಲು ಸ್ಫೋಟ ಪ್ರಕರಣದ ಅಪರಾಧಿಗಳನ್ನು ಖುಲಾಸೆಗೊಳಿಸಿದ್ದ ಬಾಂಬೆ ಹೈಕೋರ್ಟ್ ಆದೇಶಕ್ಕೆ ಸುಪ್ರೀಂ ಕೋರ್ಟ್ ಗುರುವಾರ ತಡೆ ನೀಡಿದೆ. ಆದರೆ, ಆರೋಪಿಗಳು ಮತ್ತೆ ಜೈಲಿಗೆ ಹೋಗುವ ಅವಶ್ಯಕತೆ ಇಲ್ಲ ಎಂದಿದೆ.

2006ರ ಮುಂಬೈ ಲೋಕಲ್ ರೈಲು ಸ್ಫೋಟ ಪ್ರಕರಣದಲ್ಲಿ ಕೆಳ ನ್ಯಾಯಾಲಯ ವಿಧಿಸಿದ್ದ 12 ಮಂದಿಯ ಶಿಕ್ಷೆಯನ್ನು ಬಾಂಬೆ ಹೈಕೋರ್ಟ್ ಜುಲೈ 21ರಂದು ರದ್ದು ಮಾಡಿತ್ತು.

## ಶಾಲೆಯಲ್ಲಿ ಮೊಟ್ಟೆ ವಿತರಣೆಗೆ ಗ್ರಾಮಸ್ಥರ ವಿರೋಧ; ಮಕ್ಕಳಿಂದ ಶಾಲೆ ತೊರೆಯುವ ಬೆದರಿಕೆ


**■ವಿಜಯಸಾಕ್ಷಿ ಸುದ್ದಿ, ಮಂಡ್ಯ**

ಮಂಡ್ಯ ಜಿಲ್ಲೆಯ ಆಲಕೆರೆ ಸರ್ಕಾರಿ ಶಾಲೆಯಲ್ಲಿ ಮಧ್ಯಾಹ್ನದ ಊಟಕ್ಕೆ ನೀಡಲು ಮೊಟ್ಟೆ ಬೇಯಿಸುವುದಕ್ಕೆ ಗ್ರಾಮಸ್ಥರು ವಿರೋಧ ವ್ಯಕ್ತಪಡಿಸಿದ್ದು, ಎಂಬತ್ತು ವಿದ್ಯಾರ್ಥಿಗಳು ಶಾಲೆಯನ್ನು ಬಿಡುವುದಾಗಿ ಬೆದರಿಕೆ ಹಾಕಿದ್ದಾರೆ ಎಂದು ತಿಳಿದುಬಂದಿದೆ.

ಮಕ್ಕಳಲ್ಲಿನ ಅಪೌಷ್ಟಿಕತೆ ನಿವಾರಣೆ ಮತ್ತು ಕಲಿಕಾ ಸಾಮರ್ಥ್ಯ ಹೆಚ್ಚಿಸಲು ಶಾಲೆಗಳಲ್ಲಿ ಮೊಟ್ಟೆ ವಿತರಣೆಗೆ ಶಿಕ್ಷಣ ಇಲಾಖೆ ನಿರ್ಧರಿಸಿದೆ. ಆದರೆ, ಸರ್ಕಾರದ ಈ ನಿರ್ಧಾರವು ಗ್ರಾಮಸ್ಥರಿಂದ ತೀವ್ರ ವಿರೋಧ ಎದುರಿಸಿದೆ.

### ಬಲ್ಡೋಟಾ ಕಂಪನಿ ಮೇಲೆ ಕ್ರಮ ಜರುಗಿಸುವಂತೆ ಪ್ರತಿಭಟನೆ, ಮನವಿ ಸಲ್ಲಿಕೆ

# ಬಸಾಪೂರ ಕೆರೆ ತೆರವಿಗೆ ಹೋರಾಟ ಯಶಸ್ವಿ




ಕೆರೆಯ ಪೂರ್ವ ಭಾಗ ಮತ್ತು ಉತ್ತರ ಭಾಗದಲ್ಲಿ ಸುಮಾರು 10-15 ಎಕರೆ ಕೆರೆಯನ್ನು ಮುಚ್ಚಿ ರಸ್ತೆ ನಿರ್ಮಿಸಿರುವುದನ್ನು ತೆರವುಗೊಳಿಸಬೇಕೆಂದು, ಕೆರೆ ಸರ್ವೆ ಮಾಡಿ, ಹದ್ದುಬಸ್ತ್ ಮಾಡಿ ತಾವೇ ನಿರ್ವಹಣೆ ಮಾಡಬೇಕೆಂದು, ಕಂಪನಿ ಜೊತೆ ಮಿಲಾಪಿಯಾಗಿ ಸಾರ್ವಜನಿಕರ ಹಕ್ಕನ್ನು ಧಿಕ್ಕರಿಸುವ ವರದಿ ನೀಡಿರುವ ನಿಮ್ಮ ಅಧೀನ ಅಧಿಕಾರಿಗಳ ಮೇಲೆ ಉನ್ನತಾಧಿಕಾರಿಗಳ ಮಟ್ಟದ ಅಧಿಕಾರಿಗಳಿಂದ ತನಿಖೆ ನಡೆಸಿ, ತಪ್ಪಿತಸ್ಥರ ಮೇಲೆ ಕಾನೂನು ಕ್ರಮ ತೆಗೆದುಕೊಳ್ಳಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

**■ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ಕೊಪ್ಪಳ ಜಿಲ್ಲಾ ಬಚಾವೋ ಆಂದೋಲನ ಮತ್ತು ಪರಿಸರ ಹಿತರಕ್ಷಣಾ ವೇದಿಕೆ ಜಂಟಿ ಕ್ರಿಯಾ ವೇದಿಕೆ ಮೂಲಕ ಜಿಲ್ಲಾಧಿಕಾರಿ ಕಛೇರಿ ಎದುರು ಜನಜಾನುವಾರು ಹೋರಾಟ ಹಮ್ಮಿಕೊಳ್ಳಲಾಗಿತ್ತು. ಜಿಲ್ಲಾಡಳಿತದ ಅನುಮತಿ ಸಿಗದ ಹೊರತಾಗಿಯೂ ಜಾನುವಾರುಗಳನ್ನು ಬಲ್ಡೋಟಾ ಒಳಗಡೆ ಕಳುಹಿಸುವ ಮೂಲಕ ಹೋರಾಟ ತೀವ್ರಸ್ವರೂಪ ಪಡೆದುಕೊಂಡಿತು.

ತಾಲೂಕಿನ ಬಸಾಪೂರ ಗ್ರಾಮದ ಸ.ನಂ. 143ರ 44.35 ಎಕರೆ ವಿಸ್ತೀರ್ಣದ ಸಾರ್ವಜನಿಕ ಕೆರೆಯನ್ನು ಅತಿಕ್ರಮಿಸಿ, ಕಂಪೌಂಡ್ ನಿರ್ಮಿಸಿ, ರಸ್ತೆ ಬಂದ್ ಮಾಡಿರುವ ಬಲ್ಡೋಟಾ ಕಂಪನಿ ಮೇಲೆ ಕ್ರಮ ಜರುಗಿಸಿ, ಕಂಪೌಂಡ್ ತೆರವುಗೊಳಿಸುವಂತೆ ಮನವಿ ಸಲ್ಲಿಸಲಾಗಿತ್ತು. ಆದರೆ, ತೆರವುಗೊಳಿಸದ ಜಿಲ್ಲಾಡಳಿತದ ವಿರುದ್ಧ ಜನಜಾನುವಾರು ಪ್ರತಿಭಟನೆ ನಡೆಸಿ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಲಾಯಿತು.

ಬಲ್ಡೋಟಾ ಕಂಪನಿ ಆರಂಭದಿಂದಲೂ ಆಕ್ರಮಣಕಾರಿ ನೀತಿಯನ್ನು ಅನುಸರಿಸಿ ರೈತರ ಮೇಲೆ ದೌರ್ಜನ್ಯದಿಂದ ಭೂಮಿ ವಶಪಡಿಸಿಕೊಂಡಿದೆ. ಹಿಂದಿನ ಕೆಲವು ಅಧಿಕಾರಿಗಳು ಸಹ ಅದಕ್ಕೆ ಸಾಥ್ ನೀಡಿದ್ದು, ಜನರ ಪ್ರಾಣ ಮತ್ತು ಬದುಕು ಮುಖ್ಯವಾಗಿರುವ ಕಾರಣ ಬೆಲೆಬಾಳುವ ಹಾಗೂ ಜನ-ಜಾನುವಾರುಗಳಿಗೆ ಅವಶ್ಯವಿರುವ ಕೆರೆಯನ್ನು ಸಾರ್ವಜನಿಕರಿಗೆ ಬಿಟ್ಟುಕೊಡುವಂತೆ ಉಚ್ಚ ನ್ಯಾಯಾಲಯದ ತೀರ್ಪು ಇದ್ದಾಗ್ಯೂ ಸಹ ತೆರವುಗೊಳಿಸದಿರುವ ಅಧಿಕಾರಿಗಳ ನಡೆ ಅನುಮಾನಕ್ಕೆ ಕಾರಣವಾಗಿದೆ. ಮುಖ್ಯಮಂತ್ರಿಗಳು, ಸಚಿವ/ಶಾಸಕರು ಕೆರೆ ವೀಕ್ಷಣೆಗೆ ಮತ್ತು ಬಾಧಿತ ಪ್ರದೇಶಕ್ಕೆ ಭೇಟಿ ನೀಡಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಜಿಲ್ಲಾಡಳಿತದ ಪರವಾಗಿ ಸಹಾಯಕ ಆಯುಕ್ತ ಕ್ಯಾಪ್ಟನ್ ಮಹೇಶ ಮಾಲಗಿತ್ತಿ ಮನವಿ ಸ್ವೀಕರಿಸಿದರು. ಈ ಸಂದರ್ಭದಲ್ಲಿ ಜಂಟಿ ಕ್ರಿಯಾ ವೇದಿಕೆ ಮುಖಂಡರಾದ ಪ್ರೊ. ಅಲ್ಲಮಪ್ರಭು ಬೆಟ್ಟದೂರು, ಕೆ.ಬಿ. ಗೋನಾಳ, ಬಸವರಾಜ ಶೀಲವಂತರ, ಮಂಜುನಾಥ ಜಿ.ಗೊಂಡಬಾಳ, ಶರಣು ಗಡ್ಡಿ, ಮುದುಕಪ್ಪ ಹೊಸಮನಿ, ಎಸ್.ಎ. ಗಫಾರ್, ಭೀಮಸೇನ ಕಲಕೇರಿ, ಕನಕಪ್ಪ ಪೂಜಾರ, ಲಿಂಗರಾಜ ನವಲಿ, ಗಾಳೆಪ್ಪ ಮುಂಗೋಲಿ, ಮಂಗಳೇಶ ರಾಠೋಡ, ಕಾಶಪ್ಪ ಚಲುವಾದಿ, ಶರಣು ಶೆಟ್ಟರ್, ಮಂಜುನಾಥ ಕವಲೂರ, ಯಮನೂರಪ್ಪ ಹಾಲಳ್ಳಿ, ಪ್ರಕಾಶ ಎಂ, ಭೀಮಪ್ಪ, ಸುಂಕಪ್ಪ ಮೀಸಿ, ಶಿವಪ್ಪ ಹಡಪದ, ಹನುಮೇಶ, ಭರಮಪ್ಪ, ಮಾರುತಿ, ಯಮನೂರಪ್ಪ, ಮೂಕಪ್ಪ ಬಸಾಪೂರ ಇತರರು ಇದ್ದರು.

### ಎಸ್.ಟಿ. ಕಳಸಾಪೂರ ಗುರುಗಳ ಗುರುವಂದನಾ ಕಾರ್ಯಕ್ರಮದಲ್ಲಿ ಅಭಿನವ ಚನ್ನಬಸವ ಶ್ರೀ

# ಜೀವನದಲ್ಲಿ ಗುರುವಿನ ಋಣ ದೊಡ್ಡದು



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಮನುಷ್ಯ ಮನೆಯಲ್ಲಿ ಹುಟ್ಟಿ ಬೆಳೆದರೂ, ಮುಂದೆ ಅವನಿಗೆ ಬದುಕು ಸಾಗಿಸಲು ಶಿಕ್ಷಣ ಬೇಕು. ಈ ಶಿಕ್ಷಣ ನೀಡುವ ಗುರುವಿನ ಋಣ ಮನುಷ್ಯನ ಜೀವನದಲ್ಲಿ ಬಹಳಷ್ಟು ದೊಡ್ಡದಾಗಿರುತ್ತದೆ ಎಂದು ನಿಡಗುಂದಿಕೊಪ್ಪದ ಅಭಿನವ ಚನ್ನಬಸವ ಸ್ವಾಮೀಜಿ ಹೇಳಿದರು.

ಸಮೀಪದ ಬೂದಿಹಾಳದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 1996-97 ಮತ್ತು 98ನೇ ಸಾಲಿನ ವಿದ್ಯಾರ್ಥಿಗಳು ಎಸ್.ಟಿ. ಕಳಸಾಪೂರ ಗುರುಗಳಿಗೆ ನೀಡಿದ ಗುರುವಂದನೆ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಶ್ರೀಗಳು ಆಶೀರ್ವಚನ ನೀಡಿದರು.

ಗುರು ಎಂದರೆ ಕತ್ತಲೆಯನ್ನು ಕಳೆಯುವವ ಎಂದರ್ಥ. ನಮ್ಮ ಬದುಕಿನ ಕತ್ತಲೆಯನ್ನು ಕಳೆದು ಬೆಳಕನ್ನು ನೀಡಿ ನಮ್ಮ ಜೀವನವನ್ನು ಉದ್ಧರಿಸುವ ಗುರುವನ್ನು ನಾವೆಂದಿಗೂ ಮರೆಯಬಾರದು. ಈ ಉದ್ದೇಶದಿಂದ ಕಳಸಾಪೂರ ಗುರುಗಳ ಕೈಯಲ್ಲಿ ಕಲಿತ ವಿದ್ಯಾರ್ಥಿಗಳು ಅವರಿಗೆ ಗುರುವಂದನೆ ಸಲ್ಲಿಸಿರುವುದು ಅತ್ಯಂತ ಸೂಕ್ತವಾದ ಕಾರ್ಯ ಎಂದು ತಿಳಿಸಿದರು.

ನಿವೃತ್ತ ಶಿಕ್ಷಕ ಎಂ.ಎಸ್. ದಢೇಸೂರಮಠ ಮಾತನಾಡಿ, ಗುರುವಿನ ನೆನಪು ಜೀವನದಲ್ಲಿ ಅಮೃತದ ಧಾರೆಯಿದ್ದಂತೆ. ನಮಗೆ ಬದುಕು ನೀಡಿ ನಮ್ಮ ವ್ಯಕ್ತಿತ್ವ ವಿಕಸನವಾಗಲು ಸಹಾಯ ಮಾಡುವ ಗುರುವನ್ನು ನಾವೆಂದಿಗೂ ಮರೆಯಬಾರದು. ಮನೆಯಲ್ಲಿ ತಂದೆ-ತಾಯಿಗಳು ನಮಗೆ ಜನ್ಮ ನೀಡಿದ ಗುರುಗಳಾದರೆ, ನಮ್ಮ ವ್ಯಕ್ತಿತ್ವವನ್ನು ರೂಪಿಸಿದ ಗುರು ಇನ್ನೊಬ್ಬ ದೇವರಾಗುತ್ತಾನೆ. ಅವನನ್ನು ನಿತ್ಯವೂ ಸ್ಮರಿಸಿ ನಮ್ಮ ಜೀವನವನ್ನು ಪಾವನ ಮಾಡಿಕೊಳ್ಳಲು ಇಂತಹ ಗುರುವಂದನೆ ಕಾರ್ಯಗಳು ನಡೆಯುತ್ತಿವೆ ಎಂದರು.

ಶಿವನಗೌಡ ಪಾಟೀಲ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಶಿಕ್ಷಕ ಬಿ.ವಿ. ದೇಸಾಯಿಪಟ್ಟಿ, ಸಿಆರ್‌ಪಿ ಎಸ್.ಆರ್. ಮೂಲಿಮನಿ, ಶಿಕ್ಷಕ ಸಿ.ಕೆ. ಕೇಸರಿ, ಅತಿಥಿ ಶಿಕ್ಷಕಿಯರಾದ ಐಶ್ವರ್ಯ ಬಿಂಗಿ, ದೀಪಾ ಪೂಜಾರ ಮತ್ತು ಕಾವ್ಯಾ ಮರಲಿಂಗಣ್ಣವರ, ಎಸ್‌ಡಿಎಂಸಿ ಅಧ್ಯಕ್ಷ ಯಲ್ಲಪ್ಪಗೌಡ ಬರಮಗೌಡ್ರ, ಗ್ರಾಮಸ್ಥರು ಪಾಲ್ಗೊಂಡಿದ್ದರು. ಸಿದ್ದಶಾಸ್ತ್ರಿಗಳು ಹಡಗಲಿ ಸ್ವಾಗತಿಸಿದರು. ಬಸವರಾಜ ಮಂಡಲಗೇರಿ ನಿರೂಪಿಸಿದರು. ಮಲ್ಲಯ್ಯ ನಪುರಿ ವಂದಿಸಿದರು.

# ಶಹರ ಅಧ್ಯಕ್ಷರಾಗಿ ಕೊಲ್ಲಪ್ಪ ಬ್ಯಾಹಟ್ಟಿ ನೇಮಕ



**■ವಿಜಯಸಾಕ್ಷಿ ಸುದ್ದಿ, ಗದಗ**

ಜೈ ಭೀಮ್ ರಾಜ್ಯ ಸಂಘರ್ಷ ಸಮಿತಿ ಗದಗ ಜಿಲ್ಲಾ ಘಟಕದ ಅಧ್ಯಕ್ಷ ಗಣೇಶ ವಾಯ್. ಹುಬ್ಬಳ್ಳಿಯವರು ಕೊಲ್ಲಪ್ಪ ಬ್ಯಾಹಟ್ಟಿಯವರನ್ನು ಸಮಿತಿಯ ಗದಗ ನಗರ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿ ಆದೇಶ ಪತ್ರ ನೀಡಿದರು.

ಈ ಸಂದರ್ಭದಲ್ಲಿ ಮಾರ್ಗದರ್ಶಕ ಎಸ್.ಎನ್. ಬಳ್ಳಾರಿ ಮಾತನಾಡಿ, ಜೈ ಭೀಮ್ ರಾಜ್ಯ ಸಂಘರ್ಷ ಸಮಿತಿಯು ಸರ್ವ ಜನಾಂಗದವರನ್ನು ಒಳಗೊಂಡು ಸಂಘಟನೆ ಮಾಡುತ್ತಿರುವುದು ಶ್ಲಾಘನೀಯವಾಗಿದೆ ಎಂದರು.

ಸಮಿತಿಯ ಉಪಾಧ್ಯಕ್ಷ ಮಂಜುನಾಥ ಎಫ್.ತೌಜಲ್, ರೋಣ ತಾಲೂಕಾಧ್ಯಕ್ಷ ಬಸವರಾಜ ಬದಾಮಿ, ಅಲ್ಪಸಂಖ್ಯಾತರ ಘಟಕದ ಜಿಲ್ಲಾಧ್ಯಕ್ಷ ರಾಷ್ಟ್ರೀನ್ ಜೋಸೆಫ್, ಅಲ್ಪಸಂಖ್ಯಾತರ ಘಟಕದ ಉಪಾಧ್ಯಕ್ಷ ರಾಜೇಶ ವಿ.ಶೆಟ್ಟರ್, ಅಲ್ಪಸಂಖ್ಯಾತರ ಯುವ ಘಟಕದ ಜಿಲ್ಲಾಧ್ಯಕ್ಷ ಇಮಾಮಹುಸೇನ ಕುನ್ನಿಬಾವಿ, ಕಾರ್ಯದರ್ಶಿ ಎಸ್.ಕೆ. ಕುನ್ನಿಬಾವಿ, ನಜೀರ ಕುನ್ನಿಬಾವಿ, ಸಹ-ಕಾರ್ಯದರ್ಶಿ ಶಿವಣ್ಣ ಕಡಿವಾಲ, ಯುವ ಘಟಕ ಅಧ್ಯಕ್ಷ ಪ್ರೇಮಕುಮಾರ ಹುಬ್ಬಳ್ಳಿ, ಪರದೀನ ಕಾಟಾಪುರ, ರಫೀಕ ನವಲಗುಂದ, ಮಡಿವಾಳ ಸಮಾಜದ ಮುಖಂಡರಾದ ಕೃಷ್ಣಾ ಮಡಿವಾಳರ, ಆದಿ, ಶ್ರೀಕಾಂತ ಹಲವಾಗಲಿ, ಹೇಮಂತ ಹುಬ್ಬಳ್ಳಿ ಉಪಸ್ಥಿತರಿದ್ದರು.

### ಸಿಎ ಪರೀಕ್ಷೆ ಉತ್ತೀರ್ಣರಾದ ಅಜಯ ದೊಡ್ಡಮೇಟಿಗೆ ಸನ್ಮಾನ

# ವಿದ್ಯೆಗೆ ವಿನಯವೇ ಭೂಷಣ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸಿಎ ಪರೀಕ್ಷೆಯು ಎಲ್ಲ ಪರೀಕ್ಷೆಗಳಂತಲ್ಲ. ಅದನ್ನು ಪಾಸಾಗಲು ಕಠಿಣ ಪರಿಶ್ರಮ ಬೇಕು. ಜಕ್ಕಲಿ ಗ್ರಾಮದ ಅಜಯ ದೊಡ್ಡಮೇಟಿ ಸಿಎ ಪಾಸಾಗುವ ಮೂಲಕ ಗದಗ ಜಿಲ್ಲೆಯ ಹೆಸರನ್ನು ಎತ್ತರಕ್ಕೇರಿಸಿದ್ದಾರೆ ಎಂದು ರೋಣ ಪುರಸಭೆಯ ಸದಸ್ಯ ಮಿಥುನ್ ಪಾಟೀಲ ಹೇಳಿದರು.



ಜಕ್ಕಲಿ ಗ್ರಾಮದ ಅಜಯ ಅವರ ಮನೆಯಲ್ಲಿ ನಡೆದ ಸಮಾರಂಭದಲ್ಲಿ ಅವರನ್ನು ಸನ್ಮಾನಿಸಿ ಮಾತನಾಡಿದರು.

ಸತತ ಪ್ರಯತ್ನ, ಪರಿಶ್ರಮ ಮತ್ತು ಆತ್ಮವಿಶ್ವಾಸದಿಂದ ಪರೀಕ್ಷೆಯನ್ನು ಎದುರಿಸಿದರೆ ಮಾತ್ರ ಸಿಎ ಪರೀಕ್ಷೆಯನ್ನು ಪಾಸಾಗಲು ಸಾಧ್ಯವಾಗುತ್ತದೆ. ವಿದ್ಯೆಗೆ ವಿನಯವೇ ಭೂಷಣ ಎನ್ನುವ ಮಾತಿದೆ. ಅಜಯನಲ್ಲಿನ ಈ ಗುಣ ಕಂಡು ಸಂತೋಷವಾಗಿದೆ. ಭಗವಂತ ಖಂಡಿತ ಅವರಿಗೆ ಒಳ್ಳೆಯದನ್ನು ಮಾಡುತ್ತಾನೆ ಎಂದು ಮಿಥುನ್ ಪಾಟೀಲ ಹೇಳಿದರು.

ಕೆಪಿಸಿಸಿ ಯುವ ಘಟಕದ ಕಾರ್ಯದರ್ಶಿ ಅಕ್ಷಯ ಪಾಟೀಲ ಮಾತನಾಡಿ, ಗ್ರಾಮೀಣ ಭಾಗದ ಮಕ್ಕಳು ಪ್ರತಿಭಾವಂತರಲ್ಲ ಎಂಬ ಮಾತನ್ನು ಸಿಎ ಪಾಸಾಗುವ ಮೂಲಕ ಅಜಯ ಸುಳ್ಳಾಗಿಸಿದ್ದಾರೆ. ಗ್ರಾಮೀಣ ಭಾಗದಲ್ಲಿ ಅತ್ಯಂತ ಕಡಿಮೆ ಸೌಲಭ್ಯಗಳಿರುವ ಸಂದರ್ಭದಲ್ಲಿಯೂ ಸಿಎನಂತಹ ಪರೀಕ್ಷೆಗಳನ್ನು ಪಾಸಾಗಬಹುದೆಂಬುದನ್ನು ಅಜಯ ಸಾಧಿಸಿ ತೋರಿರುವುದು ನಮಗೆಲ್ಲ ಹೆಮ್ಮೆಯ ವಿಷಯ ಎಂದರು.

ಸಭೆಯನ್ನುದ್ದೇಶಿಸಿ ನಿವೃತ್ತ ಶಿಕ್ಷಕ ಎಂ.ಎಸ್. ದಢೇಸೂರಮಠ, ಮಲ್ಲಣ್ಣ ಮೇಟಿ, ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಮಾತನಾಡಿದರು. ಹಿರಿಯರಾದ ಶೇಖಣ್ಣ ಮೇಟಿ ಅಧ್ಯಕ್ಷತೆ ವಹಿಸಿದ್ದರು. ಈ ಸಂದರ್ಭದಲ್ಲಿ ರಾಜಶೇಖರ ಮೇಟಿ, ಶಿವನಾಗಪ್ಪ ದೊಡ್ಡಮೇಟಿ, ಗುರುಲಿಂಗಮೂರ್ತಿ ಮಂಟಯ್ಯನಮಠ, ಚನ್ನಬಸವ ದೊಡ್ಡಮೇಟಿ, ಲಿಂಗಪ್ಪ ದೊಡ್ಡಮೇಟಿ, ಸಂದೇಶ ದೊಡ್ಡಮೇಟಿ, ರಮೇಶ ಪಲ್ಲೇದ, ಶಿವರಾಜ ಮುಗಳಿ, ಗುರಪ್ಪ ರೋಣದ, ಡಾ. ಎ.ವಿ. ನರೇಗಲ್ಲ, ಹರ್ಷವರ್ಧನ ದೊಡ್ಡಮೇಟಿ, ದೊಡ್ಡಮೇಟಿ ಕುಟುಂಬದ ಸದಸ್ಯರಿದ್ದರು.

ಮುತ್ತಣ್ಣ ಮೇಟಿ ಸ್ವಾಗತಿಸಿದರು. ರವಿ ಮುಗಳಿ ನಿರೂಪಿಸಿದರು. ಶಿವರಾಜ ಮುಗಳಿ ವಂದಿಸಿದರು.

## ಪಶು ವೈದ್ಯಾಧಿಕಾರಿಗಳಿಗೆ ಸನ್ಮಾನ



■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ ಗದಗ ಜಿಲ್ಲೆಗೆ ಮುಖ್ಯ ಪಶುವೈದ್ಯಾಧಿಕಾರಿಯಾಗಿ ಆಗಮಿಸಿದ ಡಾ. ಉಮೇಶ ಹನಮರೆಡ್ಡಿ ತಿರ್ಲಾಪೂರ, ಮುಖ್ಯ ಪಶುವೈದ್ಯಾಧಿಕಾರಿ (ಆಡಳಿತ) ಡಾ. ಎಚ್.ವೈ. ಹೊನ್ನಿನಾಯ್ಕರ ಹಾಗೂ ಗದಗಿನಲ್ಲಿ ಸೇವೆ ಸಲ್ಲಿಸಿ ಉತ್ತರ ಕನ್ನಡ ಜಿಲ್ಲೆಯ ಶಿರಸಿ ತಾಲೂಕಿನ ಬನವಾಸಿಯ ಪಶು ಆಸ್ಪತ್ರೆಗೆ ಮುಖ್ಯ ಪಶುವೈದ್ಯಾಧಿಕಾರಿ ಪದೋನ್ನತಿ ಹೊಂದಿದ ಡಾ. ಆರ್. ಎಮ್. ನಾಯ್ಕರ ಅವರುಗಳಿಗೆ ಹಾಲುಮತ ಮಹಾಸಭಾದ ವತಿಯಿಂದ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಹಾಲಮತ ಮಹಾಸಭಾದ ರಾಜ್ಯಾಧ್ಯಕ್ಷ ರುದ್ರಣ್ಣ ಗುಳಗುಳಿ, ಜಿಲ್ಲಾ ಪದಾಧಿಕಾರಿಗಳಾದ ನಾಗರಾಜ ಮೆಣಸಗಿ, ಸೋಮನಗೌಡ ಪಾಟೀಲ, ರಾಘು ವಗ್ಗನವರ, ಮುತ್ತು ಜಡಿ, ಸತೀಶ ಗಿಡ್ಡಹನುಮಣ್ಣವರ, ಹನುಮಂತ ಗಿಡ್ಡಹನುಣ್ಣವರ, ಹರ್ಷಿತಾ ಇಮರಾಪೂರ ಮುಂತಾದವರು ಉಪಸ್ಥಿತರಿದ್ದರು.

ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ

# ಗದಗ ಜಿಲ್ಲೆಯಲ್ಲಿ ಉತ್ತಮ ಪ್ರಗತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಒಟ್ಟು 2970 ದಮನಿತ ಮಹಿಳೆಯರಿದ್ದಾರೆ. 2015-16ರಿಂದ 2024-2025ನೇ ಸಾಲಿನವರೆಗೆ 187 ಮಹಿಳೆಯರಿಗೆ ಚೇತನ ಯೋಜನೆಯ ಸೌಲಭ್ಯ ನೀಡಲಾಗಿದೆ. 2016-17ರಿಂದ 2024-2025ನೇ ಸಾಲಿನವರೆಗೆ ಧನಶ್ರೀ ಯೋಜನೆಯಡಿ 174 ಜನರು ಸೌಲಭ್ಯ ಪಡೆದಿದ್ದಾರೆ. ಜಿಲ್ಲೆಯಲ್ಲಿ 2015-16ರಿಂದ 2024-2025ನೇ ಸಾಲಿನವರೆಗೆ 825 ಲಿಂಗತ್ವ ಅಲ್ಪಸಂಖ್ಯಾತರ ಪೈಕಿ 155 ಲಿಂಗತ್ವ ಅಲ್ಪಸಂಖ್ಯಾತರು ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆಯ ಸೌಲಭ್ಯ ಪಡೆದಿದ್ದಾರೆ. ಪ್ರಸ್ತುತ 73 ಲಿಂಗತ್ವ ಅಲ್ಪಸಂಖ್ಯಾತರಿಗೆ ಗುರುತಿನ ಚೀಟಿ ನೀಡಲಾಗಿದೆ ಮತ್ತು ಗೃಹಲಕ್ಷ್ಮೀ ಯೋಜನೆಯಡಿ 52 ಜನ ಲಿಂಗತ್ವ ಅಲ್ಪಸಂಖ್ಯಾತರು ಸೌಲಭ್ಯ ಪಡೆದಿದ್ದಾರೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಪದ್ಮಾವತಿ ಜಿ ತಿಳಿಸಿದರು.



ಜಿಲ್ಲಾಡಳಿತ ಭವನದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಭಾಭವನದಲ್ಲಿ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಪ್ರಧಾನ ವ್ಯವಸ್ಥಾಪಕಿ ಅಕ್ಕಮಹಾದೇವಿ ಕೆ.ಎಚ್ ನಿಗಮದ ಯೋಜನೆಗಳ ಪ್ರಗತಿ ಪರಿಶೀಲನೆಯನ್ನು ನಡೆಸಿ, ಗದಗ ಜಿಲ್ಲೆಯಲ್ಲಿ ನಿಗಮದ ಯೋಜನೆಯಡಿ ಕೈಗೊಂಡ ಪ್ರಗತಿಗಳ ಮಾಹಿತಿ ನೀಡಿದರು.

ಮಹಿಳೆಯರನ್ನು ಆರ್ಥಿಕವಾಗಿ ಸಬಲೀಕರಣಗೊಳಿಸುವುದಕ್ಕಾಗಿ ಹಾಗೂ ಅವರ ಶ್ರೇಯೋಭಿವೃದ್ಧಿಗಾಗಿ ಸರ್ಕಾರವು ಅನೇಕ ಯೋಜನೆಗಳನ್ನು ಜಾರಿಗೆ ತಂದಿದೆ.

ಅವುಗಳ ಅನುಷ್ಠಾನಕ್ಕಾಗಿ ಇಲಾಖೆಯ ಅಧಿಕಾರಿಗಳು ಜಿಲ್ಲೆಯಲ್ಲಿ ನಿಗಮದ ಯೋಜನೆಯಡಿ ಉತ್ತಮವಾಗಿ ಕೆಲಸ ಮಾಡಿ ಪ್ರಗತಿಯನ್ನು ಸಾಧಿಸಿದ್ದಾರೆ. ಅಭಿವೃದ್ಧಿ ನೀರಿಕ್ಷಕರಾದ ದಾಕ್ಷಾಯಿಣಿ ಪಾಟೀಲ ಹಾಗೂ ದೇವದಾಸಿ ಪುನರ್ವಸತಿ ಯೋಜನೆಯ ಯೋಜನಾಧಿಕಾರಿ ಮಧುಸೂದನ್ ಜಿಲ್ಲೆಯಲ್ಲಿ ಉತ್ತಮ ಕೆಲಸ ನಿರ್ವಹಿಸಿದ್ದಾರೆಂದು ಪದ್ಮಾವತಿ ಜಿ ಅಭಿಪ್ರಾಯ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ರಾಧಾ ಮಣ್ಣೂರ, ಅಂಗಡಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಅನುಪಮಾ, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಜಿಲ್ಲಾ ಸ್ತ್ರೀಶಕ್ತಿ ಒಕ್ಕೂಟದ ಅಧ್ಯಕ್ಷರಾದ ಪುಷ್ಪಾ, ಸೃಷ್ಟಿ ಸಂಕುಲ ಸಂಸ್ಥೆ, ನವಚೇತನ ಹಾಗೂ ರಕ್ಷಣೆ ಜಿಲ್ಲಾ ಮಹಿಳಾ ಒಕ್ಕೂಟದ ಮುಖ್ಯಸ್ಥರು, ಲಿಂಗತ್ವ ಅಲ್ಪಸಂಖ್ಯಾತರು, ದಮನಿತ ಮಹಿಳೆಯರು, ಧನಶ್ರೀ, ಉದ್ಯೋಗಿನಿ ಯೋಜನೆಯಡಿ ಸೌಲಭ್ಯ ಪಡೆದ ಮಹಿಳೆಯರು ಸೇರಿದಂತೆ ಇಲಾಖೆಯ ಸಿಬ್ಬಂದಿಗಳು ಹಾಜರಿದ್ದರು.

## ಇಂಗ್ಲಿಷ್ ಲ್ಯಾಂಗ್ವೇಜ್ ಲ್ಯಾಬ್ ಉದ್ಘಾಟನೆ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಶಹರ ವಲಯದ ಬೆಟಗೇರಿಯ ಸರಕಾರಿ ಹಿರಿಯ ಪ್ರಾಥಮಿಕ ಉರ್ದು ಹಾಗೂ ಆಂಗ್ಲ ಮಾಧ್ಯಮ ಶಾಲೆ ನಂ.2ರಲ್ಲಿ ಇಂಗ್ಲಿಷ್ ಲ್ಯಾಂಗ್ವೇಜ್ ಲ್ಯಾಬ್ ಉದ್ಘಾಟನೆ ನೆರವೇರಿಸಲಾಯಿತು.

ಜಿಲ್ಲಾ ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಆರ್.ಎಸ್. ಬುರಡಿ ಮಾತನಾಡಿ, ಅವಿರತ 3 ತಿಂಗಳು ಶ್ರಮಿಸಿ ಕೊಠಡಿಯನ್ನು ಬಣ್ಣ, ಚಿತ್ರಗಳಿಂದ ಸ್ವತಃ ಅಲಂಕರಿಸಿ ವಿದ್ಯಾರ್ಥಿಗಳಿಗೆ ಅತ್ಯುತ್ತಮ ಇಂಗ್ಲಿಷ್ ಕಲಿಕಾ ವಾತಾವರಣ ನಿರ್ಮಾಣ ಮಾಡಿದ ಶಿಕ್ಷಕಿ ಎಂ.ಎನ್. ಸೊಟಕನಾಳ ಇತರರಿಗೂ ಮಾದರಿಯಾಗಿದ್ದಾರೆ. ಇಂತಹ ಶಿಕ್ಷಕರು ಸಮಾಜದ ಆಸ್ತಿ ಎಂದು ನುಡಿದರು.

ಮುಖ್ಯ ಅತಿಥಿಗಳಾದ ಶಹರ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ವಿ. ಶೆಟ್ಟೆಪ್ಪನವರ ಮಾತನಾಡಿ, ಶಿಕ್ಷಕರ ಇಂತಹ ಪ್ರಯತ್ನ ಇಡೀ ವಲಯದ ಹೆಮ್ಮೆ ಎಂದರು.

ಸಮಾರಂಭದಲ್ಲಿ ಪಾಲ್ಗೊಂಡ ಇಲಾಖೆಯ ಬಿಆರ್‌ಪಿ, ಸಿಆರ್‌ಪಿ ಹಾಗೂ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಶಹರ ವಲಯದ ಅಧ್ಯಕ್ಷರಾದ ಮಂಗಳಗುಡ್ಡ, ಎಸ್‌ಡಿಎಂಸಿ ಅಧ್ಯಕ್ಷರು, ಸದಸ್ಯರು ಮತ್ತು ಪಾಲಕರು ಶಿಕ್ಷಕರ ಶ್ರಮದಾನಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

ಮುಖ್ಯೋಪಾಧ್ಯಾಯರಾದ ಎಸ್.ಎಂ. ಮೂಗನೂರ ಸ್ವಾಗತಿಸಿದರು. ರಶೀದ್ ವಂದಿಸಿದರು.

## ಸಾಮಾಜಿಕ ಭದ್ರತಾ ವ್ಯಾಪ್ತಿ ವಿಸ್ತರಿಸಲು ESIC SPREE-2025

■ ವಿಜಯಸಾಕ್ಷಿ ಸುದ್ದಿ, ಗದಗ

ನೌಕರರ ರಾಜ್ಯ ವಿಮಾ ನಿಗಮ (ಇಎಸ್‌ಐಸಿ) ಹಿಮಾಚಲ ಪ್ರದೇಶದ ಶಿಮ್ಲಾದಲ್ಲಿ ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಮತ್ತು ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವ ಡಾ. ಮನ್ಸುಖ್ ಮಾಂಡವಿಯಾವರ ಅಧ್ಯಕ್ಷತೆಯಲ್ಲಿ ನಡೆದ 196ನೇ ಇಎಸ್‌ಐ ಕಾರ್ಪೋರೇಶನ್ ಸಭೆಯಲ್ಲಿ SPREE 2025 (ಉದ್ಯೋಗದಾತರು ಮತ್ತು ಉದ್ಯೋಗಿಗಳ ನೋಂದಣಿಯನ್ನು ಉತ್ತೇಜಿಸುವ ಯೋಜನೆ) ಅನ್ನು ಅನುಮೋದಿಸಿದೆ.

ನೌಕರರ ರಾಜ್ಯ ವಿಮಾನಿಗಮ (ಇಎಸ್‌ಐಸಿ) ಅನೊಮೋದಿಸಿದ ಉದ್ಯೋಗದಾತರು ಮತ್ತು ಉದ್ಯೋಗಿಗಳ ನೋಂದಣಿಯನ್ನು ಉತ್ತೇಜಿಸುವ ಯೋಜನೆ (SPREE 2025) ESI ಕಾಯ್ದೆಯಡಿಯಲ್ಲಿ ಸಾಮಾಜಿಕ ಭದ್ರತಾ ವ್ಯಾಪ್ತಿಯನ್ನು ವಿಸ್ತರಿಸುವ ಗುರಿಯನ್ನು ಹೊಂದಿದೆ. ಈ ಯೋಜನೆಯು ಜುಲೈ 1ರಿಂದ ಡಿಸೆಂಬರ್ 31, 2025ರವರೆಗೆ ಸಕ್ರಿಯವಾಗಿರುತ್ತದೆ. ನೋಂದಾಯಿಸದ ಉದ್ಯೋಗದಾತರು ಮತ್ತು ಉದ್ಯೋಗಿಗಳುಗುತ್ತಿಗೆ ಮತ್ತು ತಾತ್ಕಾಲಿಕ ಕೆಲಸಗಾರರು ಸೇರಿದಂತೆ ತಪಾಸಣೆ ಅಥವಾ ಹಿಂದಿನ ಬಾಕಿಗಳ ಬೇಡಿಕೆಗಳನ್ನು ಎದುರಿಸದೇ ನೋಂದಾಯಿಸಿಕೊಳ್ಳಲು ಒಂದು ಬಾರಿ ಅವಕಾಶವನ್ನು ಒದಗಿಸುತ್ತದೆ.

ಉದ್ಯೋಗದಾತರು ತಮ್ಮ ಘಟಕಗಳು ಮತ್ತು ಉದ್ಯೋಗಿಗಳನ್ನು ಇಎಸ್‌ಐಸಿ ಪೋರ್ಟಲ್, ಶ್ರಮಸುವಿಧಾ ಮತ್ತು ಎಂಸಿಎ ಪೋರ್ಟಲ್ ಮೂಲಕ ಡಿಜಿಟಲ್ ರೂಪದಲ್ಲಿ ನೋಂದಾಯಿಸಿಕೊಳ್ಳಬಹುದು. ಉದ್ಯೋಗದಾತರು ಘೋಷಿಸಿದ ದಿನಾಂಕದಿಂದ ನೋಂದಣಿಯನ್ನು ಮಾನ್ಯವೆಂದು ಪರಿಗಣಿಸಲಾಗುತ್ತದೆ. ನೋಂದಣಿಗೆ ಮುಂಚಿನ ಅವಧಿಗಳಿಗೆ ಯಾವುದೇ ಕೊಡುಗೆ ಅಥವಾ ಪ್ರಯೋಜನ ಅನ್ವಯಿಸುವುದಿಲ್ಲ. ನೋಂದಣಿ ಪೂರ್ವ ಅವಧಿಗೆ ಯಾವುದೇ ತಪಾಸಣೆ ಅಥವಾ ಹಿಂದಿನ ದಾಖಲೆಗಳಿಗೆ ಬೇಡಿಕೆಯನ್ನು ಮಾಡಲಾಗುವುದಿಲ್ಲ.

Spree-2025ನ್ನು ಪ್ರಾರಂಭಿಸುವುದು ನೌಕರರ ರಾಜ್ಯ ವಿಮಾ ನಿಗಮವು ಎಲ್ಲರನ್ನೂ ಒಳಗೊಳ್ಳುವ ಮತ್ತು ಪ್ರವೇಶಿಸಬಹುದಾದ ಸಾಮಾಜಿಕ ಭದ್ರತೆಯ ಕಡೆಗೆ ಇಟ್ಟಿರುವ ಪ್ರಗತಿಪರ ಹೆಜ್ಜೆಯಾಗಿದೆ. ನೋಂದಣಿ ಪ್ರಕ್ರಿಯೆಯನ್ನು ಸರಳಗೊಳಿಸುವ ಮೂಲಕ ಮತ್ತು ಹಿಂದಿನ ಹೊಣೆಗಾರಿಕೆಗಳಿಂದ ವಿನಾಯಿತಿ ನೀಡುವ ಮೂಲಕ ಈ ಯೋಜನೆಯ ಉದ್ಯೋಗದಾತರು ತಮ್ಮ ಕಾರ್ಯಪಡೆಯನ್ನು ಕ್ರಮಬದ್ಧಗೊಳಿಸಲು ಪ್ರೋತ್ಸಾಹಿಸುವುದಲ್ಲದೆ ಹೆಚ್ಚಿನ ಕಾರ್ಮಿಕರು ವಿಶೇಷವಾಗಿ ಗುತ್ತಿಗೆ ವಲಯಗಳಲ್ಲಿರುವವರು ಇಎಸ್‌ಐ ಕಾಯ್ದೆಡಿಯಲ್ಲಿ ಅಗತ್ಯ ಆರೋಗ್ಯ ಮತ್ತು ಸಾಮಾಜಿಕ ಪ್ರಯೋಜನಗಳನ್ನು ಪಡೆಯುವುದನ್ನು ಖಚಿತಪಡಿಸುತ್ತದೆ. ಭಾರತದಲ್ಲಿ ಕಲ್ಯಾಣ ಕೇಂದ್ರಿತ ಕಾರ್ಮಿಕ ಪರಿಸರ ವ್ಯವಸ್ಥೆಯ ದೃಷ್ಟಿಕೋನಕ್ಕೆ ಅನುಗುಣವಾಗಿ, ತನ್ನ ವಾಪ್ತಿಯನ್ನು ಬಲಪಡಿಸಲು ಮತ್ತು ಸಾರ್ವತಿಕ ಸಾಮಾಜಿಕ ರಕ್ಷಣೆಯ ಆದೇಶವನ್ನು ಪೂರೈಸಲು ಇಎಸ್‌ಐಸಿ ಬದ್ಧವಾಗಿದೆ. ಹೆಚ್ಚಿನ ವಿವರಗಳಿಗಾಗಿ ಕರ್ನಾಟಕ ರಾಜ್ಯ ವಿಮಾ ನಿಗಮ (ಕಾರ್ಮಿಕ ಮತ್ತು ಉದ್ಯೋಗ ಮಂತ್ರಾಲಯ, ಭಾರತ ಸರ್ಕಾರ) ಉಪ ಪ್ರಾದೇಶಿಕ ಕಚೇರಿ, ಸರ್ವೆ/ ಬ್ಲಾಕ್ ಸಂ. 89, ಸುತಗಟ್ಟಿ ರೋಡ್, ಆರ್.ಟಿ.ಓ ಹತ್ತಿರ, ನವನಗರ, ಹುಬ್ಬಳ್ಳಿ-580025, ದೂರವಾಣಿ ಸಂಖ್ಯೆ 0836-2224701 ಇಲ್ಲಿಗೆ ಸಂಪರ್ಕಿಸಬಹುದಾಗಿದೆ.

ಹಿಂದಿನ ದಂಡಗಳ ಭಯವನ್ನು ತೆಗೆದುಹಾಕುವ ಮೂಲಕ ಮತ್ತು ನೋಂದಣಿ ಪ್ರಕ್ರಿಯೆಯನ್ನು ಸರಳಗೊಳಿಸುವ ಮೂಲಕ ಈ ಯೋಜನೆಯು ಸ್ವಯಂ ಪ್ರೇರಿತ ಅನುಸರಣೆಯನ್ನು ಪ್ರೋತ್ಸಾಹಿಸುತ್ತದೆ. SPREE ಗಿಂತ ಮೊದಲು, ನಿರ್ದಿಷ್ಟ ಸಮಯದ ಚೌಕಟ್ಟಿನೊಳಗೆ ನೋಂದಣಿ ಮಾಡದಿರುವುದು ಕಾನೂನು ಕ್ರಮ ಮತ್ತು ಹಿಂದಿನ ಬಾಕಿಗಳ ಬೇಡಿಕೆಗೆ ಕಾರಣವಾಗಬಹುದು. pree 2025 ಈ ಅಡತಡೆಗಳನ್ನು ಪರಿಹರಿಸುತ್ತದೆ. ಬಿಟ್ಟುಹೊದ ಸಂಸ್ಥೆಗಳು ಮತ್ತು ಕಾರ್ಮಿಕರನ್ನು ಇ.ಎಸ್.ಐ ವ್ಯಾಪ್ತಿಗೆ ತರುವ ಮತ್ತು ವಿಶಾಲವಾದ ಸಾಮಾಜಿಕ ರಕ್ಷಣೆಯನ್ನು ಖಚಿತಪಡಿಸಿಕೂಳ್ಳುವ ಗುರಿಯನ್ನು ಹೊಂದಿದೆ.

## ಗೌರಿ ಶಂಕರ ದೇವಸ್ಥಾನದಲ್ಲಿ ನಿತ್ಯ ರುದ್ರಾಭಿಷೇಕ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿಯ ಗೌರಿ ಗುಡಿ ಓಣಿಯಲ್ಲಿರುವ ಶ್ರೀ ಗೌರಿ ಶಂಕರ ದೇವಸ್ಥಾನದಲ್ಲಿ ಶ್ರಾವಣ ಮಾಸದ ಪ್ರಯುಕ್ತ ಪ್ರತಿ ನಿತ್ಯ ರುದ್ರಾಭಿಷೇಕ ಪೂಜೆಯು ಬೆಳಿಗ್ಗೆ 6ರಿಂದ 8 ಗಂಟೆಯವರೆಗೆ ದೇವಸ್ಥಾನದ ಅರ್ಚಕರಾದ ಶ್ರೀ ವೇದಮೂರ್ತಿ ಶರಣಯ್ಯ ವಿ.ಶಿವಪ್ಪಯ್ಯನಮಠ ಇವರಿಂದ ಜರುಗಲಿದೆ.




ಪೂಜಾ ಸೇವೆಯಲ್ಲಿ ಭಾಗವಹಿಸುವವರು ವಿನಾಯಕ ಸ್ವಾಮಿ ಹಿರೇಮಠ ಇವರಲ್ಲಿ ಹೆಸರು ನೋಂದಾಯಿಸಬೇಕೆಂದು ಸಮಾಜದ ಅಧ್ಯಕ್ಷ ಕಾಶಣ್ಣ ಕುಂದಗೋಳ ಮತ್ತು ಉಪಾಧ್ಯಕ್ಷ ಶರಣಬಸಪ್ಪ (ರಾಜು) ಗುಡಿಮನಿ ಇವರ ವಿನಂತಿಯಂತೆ ದೇವಸ್ಥಾನದ ಟ್ರಸ್ಟ್ ಕಮಿಟಿಯ ಚೇರಮನ್ ಶರಣಪ್ಪ ಅಣ್ಣಿಗೇರಿ ತಿಳಿಸಿದ್ದಾರೆ.

## ಉತ್ತಮ ಸೇವೆ ಸಲ್ಲಿಸಿದ ಹಿರಿಯ ನಾಗರಿಕರ ರಾಜ್ಯ ಪ್ರಶಸ್ತಿಗೆ ಅರ್ಜಿ ಆಹ್ವಾನ

▶▶ ಮೊದಲನೇ ಪುಟದಿಂದ

ನಾಗರಿಕರಿಗೆ 06 ವೈಯಕ್ತಿಕ ಪ್ರಶಸ್ತಿಗಳನ್ನು ಹಾಗೂ ಹಿರಿಯ ನಾಗರಿಕ ಕ್ಷೇತ್ರದಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ 01 ಸಂಸ್ಥೆಗೆ ಪ್ರಶಸ್ತಿ ಒಟ್ಟು 07 ಪ್ರಶಸ್ತಿಗಳನ್ನು ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಜಿಲ್ಲಾ ವ್ಯಾಪ್ತಿಯಲ್ಲಿ ಅರ್ಹ ಹಿರಿಯ ನಾಗರಿಕರು ಹಾಗೂ ಹಿರಿಯ ನಾಗರಿಕ ಕ್ಷೇತ್ರದಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ ಸಂಸ್ಥೆಗಳಿಂದ ನಿಗದಿತ 1 & 2ರ ನಮೂನೆಯ ಎಲ್ಲಾ ಕಲಂಗಳನ್ನು ಕನ್ನಡ ಭಾಷೆಯಲ್ಲಿ ಭರ್ತಿ ಮಾಡಿ ಅಗತ್ಯ ದಾಖಲಾತಿಗಳೊಂದಿಗೆ ದಿನಾಂಕ:25/08/2025ರ ಒಳಗಾಗಿ ದ್ವಿ ಪ್ರತಿಯಲ್ಲಿ ಪ್ರಸ್ತಾವನೆಯನ್ನು ವಿಕಲಚೇತನರ ಹಾಗೂ ಹಿರಿಯ ನಾಗರಿಕ ಸಬಲೀಕರಣ ಇಲಾಖೆ ಗದಗ ಕಚೇರಿಗೆ ಸಲ್ಲಿಸಲು ತಿಳಿಸಿದೆ ಹಾಗೂ ಅವಧಿ ಮೀರಿ ಬಂದ ಪ್ರಸ್ತಾವನೆಯನ್ನು ರದ್ದು ಪಡಿಸಲಾಗುವುದು .

ಹೆಚ್ಚಿನ ಮಾಹಿತಿಗಾಗಿ ಕಚೇರಿಯ ದೂರವಾಣಿ ಸಂಖ್ಯೆ: 08372-220419ಗೆ ಕಚೇರಿಯ ವೇಳೆಯಲ್ಲಿ ಸಂಪರ್ಕಿಸಲು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಕೆ. ಮಹಾಂತೇಶ್ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಹಿಳಾ, ಯುವ ಘಟಕಕ್ಕೆ ಆಯ್ಕೆ ಪ್ರಕ್ರಿಯೆ


■ ವಿಜಯಸಾಕ್ಷಿ ಸುದ್ದಿ, ಗದಗ

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಆದೇಶದಂತೆ ಮಹಾಸಭಾದ ಗದಗ ಜಿಲ್ಲಾ ಘಟಕವು ಗದಗ ಜಿಲ್ಲೆಯಲ್ಲಿ ಮಹಿಳಾ ಮತ್ತು ಯುವ ಘಟಕಗಳನ್ನು ಇನ್ನಷ್ಟು ಕ್ರಿಯಾಶೀಲಗೊಳಿಸಲು ಸನ್ನದ್ಧಗೊಂಡಿದೆ.

ಮಹಾಸಭಾದ ಧ್ಯೇಯೋದ್ದೇಶಗಳನ್ನು ಅನುಸರಿಸಿ, ಸಮಾಜಮುಖಿಯಾಗಿ ಹಾಗೂ ಸಂಘಟನಾತ್ಮಕವಾಗಿ ಕಾರ್ಯನಿರ್ವಹಿಸಲು ಇಚ್ಛಿಸುವ 35 ವರ್ಷದೊಳಗಿನ ಉತ್ಸಾಹಿ ಮಹಿಳೆಯರು, ಯುವಕರು ಮಹಾಸಭಾದ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ಮುರುಘರಾಜೇಂದ್ರ ಬಡ್ನಿ (ಮೊ-9945037111) ಅವರನ್ನು ಆಗಸ್ಟ್ 1ರೊಳಗೆ ಸಂಪರ್ಕಿಸಲು ಜಿಲ್ಲಾ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ತಿಳಿಸಿದ್ದಾರೆ.

ಮಹಾಸಭಾದ ಆಜೀವ ಸದಸ್ಯರಿದ್ದವರಿಗೆ ಮೊದಲ ಆದ್ಯತೆ ನೀಡಲಾಗುವದು. ಆಜೀವ ಸದಸ್ಯರಲ್ಲದವರ ಸದಸ್ಯತ್ವ ಪಡೆದು ಆಯ್ಕೆ ಪ್ರಕ್ರಿಯೆಗೆ ಕ್ರಮ ಜರುಗಿಸಲಾಗುವದು ಎಮದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ದೇವದಾಸಿ ಮಹಿಳೆಯರ ಸಮಗ್ರ ಪುನರ್ವಸತಿಗೆ ಒತ್ತಾಯ



■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ದೇವದಾಸಿ ಪದ್ಧತಿಯಿಂದ ವಿಮುಕ್ತಿಗೊಂಡ ಮಹಿಳೆಯರು ಮತ್ತು ಅವರ ಮಕ್ಕಳ ಸಮಗ್ರ ಪುನರ್ವಸತಿಗಾಗಿ ಶ್ರಮಿಸುತ್ತಿರುವ 'ವಿಮುಕ್ತ ದೇವದಾಸಿ ಮಹಿಳಾ ಮತ್ತು ಮಕ್ಕಳ ವೇದಿಕೆ-ಕರ್ನಾಟಕ'ವು, 2018ರ ಕರ್ನಾಟಕ ದೇವದಾಸಿ ಪದ್ಧತಿ ನಿಷೇಧ ಮತ್ತು ಪುನರ್ವಸತಿ ಕಾಯ್ದೆಯನ್ನು ತಕ್ಷಣ ಜಾರಿಗೆ ತರುವಂತೆ ರಾಜ್ಯ ಸರ್ಕಾರವನ್ನು ಒತ್ತಾಯಿಸಿದೆ.

ಇಂದು ಬೆಂಗಳೂರಿನ ಪ್ರೆಸ್‌ಕ್ಲಬ್‌ನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಮಾಜಿ ಸಚಿವ ಎಚ್. ಅಂಜನೇಯ ಅವರು, ದೇವದಾಸಿ ತಾಯಂದಿರು ಮತ್ತು ಅವರ ಮಕ್ಕಳ ಘನತೆಯ ಬದುಕಿಗೆ ಈ ಕಾಯ್ದೆ ಅನಿವಾರ್ಯ ಎಂದು ಪ್ರತಿಪಾದಿಸಿದರು.

ರಾಜ್ಯದ ವಿವಿಧ ಜಿಲ್ಲೆಗಳಿಂದ ಒಗ್ಗೂಡಿರುವ ದೇವದಾಸಿ ತಾಯಂದಿರು ಮತ್ತು ಮಕ್ಕಳು ತಮ್ಮದೇ ಆದ ವೇದಿಕೆಯನ್ನು ರೂಪಿಸಿಕೊಂಡಿದ್ದು, ದೇವದಾಸಿ ಕುಟುಂಬಗಳು ಎದುರಿಸುತ್ತಿರುವ ಸಮಸ್ಯೆಗಳು ಮತ್ತು ಸವಾಲುಗಳ ಕುರಿತು ಗಂಭೀರವಾಗಿ ಚರ್ಚಿಸಿದ್ದಾರೆ. ಈ ಸಮುದಾಯದ ಮುಖಂಡರು ಹಾಗೂ ಅವರೊಂದಿಗೆ ಕೆಲಸ ಮಾಡುತ್ತಿರುವ ಸಂಘಸಂಸ್ಥೆಗಳು ಕಳೆದ ಕೆಲವು ವರ್ಷಗಳಿಂದ ಸರ್ಕಾರದ ವಿವಿಧ ಇಲಾಖೆಗಳಿಗೆ ಮನವಿಗಳನ್ನು ಸಲ್ಲಿಸುತ್ತಾ ಬಂದಿವೆ. ಇದರ ಪರಿಣಾಮವಾಗಿ, ದೇವದಾಸಿ ತಾಯಂದಿರ ಕುಟುಂಬಗಳಿಗೆ ಶಿಕ್ಷಣ, ಉದ್ಯೋಗ, ಆರೋಗ್ಯ, ವಾಸಕ್ಕೆ ಮನೆ, ಭೂಮಿ ಸೇರಿದಂತೆ ಮೂಲಭೂತ ಸೌಲಭ್ಯಗಳನ್ನು ನೀಡಿ, ಅವರ ಸಮಗ್ರ ಅಭಿವೃದ್ಧಿಗೆ 2018ರ ದೇವದಾಸಿ ಪದ್ಧತಿ ನಿಷೇಧ ಮತ್ತು ಪುನರ್ವಸತಿ ಕಾಯ್ದೆಯನ್ನು ಜಾರಿಗೆ ತರುವ ನಿಟ್ಟಿನಲ್ಲಿ ವಿವಿಧ ಇಲಾಖೆಗಳ ಅಭಿಪ್ರಾಯಗಳನ್ನು ಪಡೆದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯು ಅಂತಿಮಗೊಳಿಸುತ್ತಿರುವುದಕ್ಕೆ ವೇದಿಕೆಯು ಅಭಿನಂದನೆ ಸಲ್ಲಿಸಿದೆ. ಸಿದ್ಧಪಡಿಸಿರುವ ಈ ಕಾಯ್ದೆಯು ದೇವದಾಸಿ ತಾಯಂದಿರು ಮತ್ತು ಮಕ್ಕಳ ಘನತೆಯ ಬದುಕಿಗೆ ದಾರಿ ಮಾಡಿಕೊಡಲಿದ್ದು, ಇದನ್ನು ತಕ್ಷಣ ಸಚಿವ ಸಂಪುಟ ಸಭೆಯಲ್ಲಿ ಮಂಡಿಸಿ ಅನುಷ್ಠಾನಗೊಳಿಸಬೇಕು ಎಂದು ವೇದಿಕೆಯು ಮನವಿ ಮಾಡಿದೆ.

## ಜು. 28 ರಿಂದ 30 ರವರೆಗೆ ಮೂಲ ದಾಖಲಾತಿಯ ಪರಿಶೀಲನೆ

▶▶ ಮೊದಲನೇ ಪುಟದಿಂದ

ದಿನಾಂಕ:28.07.2025 ರಿಂದ 30.07.2025ರ ಸಂಜೆ 04.00 ಗಂಟೆಯವರೆಗೆ ಕಚೇರಿ ದಿನಗಳಲ್ಲಿ ಖುದ್ದಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕೊಠಡಿ ಸಂಖ್ಯೆ:101, ಜಿಲ್ಲಾ ಆಡಳಿತ ಭವನ, ಗದಗ ಇಲ್ಲಿಗೆ ತಮ್ಮ ಮೂಲ ದಾಖಲಾತಿಗಳೊಂದಿಗೆ ಪರಿಶೀಲನಗೆ ಹಾಜರಾಗಲು ಇ-ಮೇಲ್ ಮೂಲಕ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ.


## ಶ್ರೀ ಕ್ಷೇತ್ರ ಜಲಾಶಂಕರದಲ್ಲಿ ಶ್ರಾವಣ ಪೂಜೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸಮೀಪದ ದಕ್ಷಿಣ ಕಾಶಿ ಕಪ್ಪತ್ತಗುಡ್ಡದ ಸೆರಗಿನಲ್ಲಿರುವ ಶ್ರೀಕ್ಷೇತ್ರ ಜಲಾಶಂಕರದಲ್ಲಿ ಶ್ರಾವಣ ಮಾಸದ ನಿಮಿತ್ತ ಒಂದು ತಿಂಗಳ ಪರ್ಯಂತ ನಿತ್ಯ ಅಭಿಷೇಕ, ಬಿಲ್ವಾರ್ಚನೆ, ಮಹಾಮಂಗಳಾರತಿ ಜರುಗಲಿದೆ. ಅಭಿಷೇಕ ಪೂಜೆ ಮಾಡಿಸುವ ಭಕ್ತಾಧಿಗಳು ಜಲಾಶಂಕರ ಅರ್ಚಕರಾದ ಮಲ್ಲಯ್ಯಸ್ವಾಮಿ ಅಂಗಡಿ (ಹಿರೇಮಠ) ಮೊ-9743418223 ಇವರನ್ನು ಸಂಪರ್ಕಿಸಬೇಕೆಂದು ಪತ್ರಿಕಾ ಪ್ರಕಟಣೆ ತಿಳಿಸಿದೆ.

## ನಿಧನ

**ಕವಿತಾ ಕಾಶಪ್ಪನವರ**



**ಗದಗ:** ಮಹಿಳಾ ಚಿಂತಕಿ, ರಂಗಭೂಮಿ, ಆಕಾಶವಾಣಿ ಕಲಾವಿದೆ ಹಾಗೂ ಕೆವಿಎಸ್‌ಆರ್ ಕಾಲೇಜಿನ ನಿವೃತ್ತ ಪ್ರಾಂಶುಪಾಲರಾದ ಕವಿತಾ ಕಾಶಪ್ಪನವರ (65) ಗುರುವಾರ ನಿಧನರಾದರು. ಮೃತರು ಪುತ್ರ, ಪುತ್ರಿ ಸೇರಿದಂತೆ ಅಪಾರ ಬಳಗವನ್ನು ಅಗಲಿದ್ದಾರೆ.

## ಶ್ರಾವಣ ವಿಶೇಷ ಪೂಜೆಗೆ ಚಾಲನೆ



■ ವಿಜಯಸಾಕ್ಷಿ ಸುದ್ದಿ, ಅಜ್ಜಂಪುರ

ಪರಮ ತಪಸ್ವಿ ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳು ತಪಗೈದ ಬುಕ್ಕಾಂಬುಧಿ ಬೆಟ್ಟದಲ್ಲಿ ಶ್ರಾವಣ ಮಾಸದ ಪ್ರಯುಕ್ತ ಒಂದು ತಿಂಗಳ ಕಾಲ ರುದ್ರಾಭಿಷೇಕ ಅಷ್ಟೋತ್ತರ ಮಹಾಮಂಗಲ ಕಾರ್ಯಕ್ರಮಗಳು ಜರುಗಲಿವೆ ಎಂದು ಟ್ರಸ್ಟಿನ ಅಧ್ಯಕ್ಷರಾದ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಪ್ರಕಟಪಡಿಸಿದರು.

ಅವರು ಗುರುವಾರ ತಾಲೂಕಿನ ಬುಕ್ಕಾಂಬುಧಿ ಬೆಟ್ಟದಲ್ಲಿ ಅಮವಾಸ್ಯೆ ಪೂಜೆ ನೆರವೇರಿಸಿ ಶ್ರಾವಣ ಪೂಜಾ ಕಾರ್ಯಕ್ಕೆ ಚಾಲನೆಯಿತ್ತು ಆಶೀರ್ವಚನ ನೀಡಿದರು.

ವೀರಶೈವ ಧರ್ಮ ಸಂಸ್ಕೃತಿ-ಗುರು ಪರಂಪರೆಯ ಆದರ್ಶ ಮೌಲ್ಯಗಳನ್ನು ಬೆಳೆಸಿದ ಕೀರ್ತಿ ಲಿಂ.ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳಿಗೆ ಸಲ್ಲುತ್ತದೆ. ಯುಗ ಪುರುಷರಾಗಿ ಸರ್ವ ಭಕ್ತರ ಬಾಳಿಗೆ ಆಧ್ಯಾತ್ಮದ ಚಿಂತನೆಗಳನ್ನು ಬೋಧಿಸಿ ಸನ್ಮಾರ್ಗಕ್ಕೆ ಕರೆತಂದ ಕೀರ್ತಿ ಅವರದಾಗಿದೆ. ಶ್ರೀ ಉಜ್ಜಯಿನಿ ಜಗದ್ಗುರು ಸಿದ್ಧಲಿಂಗ ಶಿವಾಚಾರ್ಯ ಟ್ರಸ್ಟ ಒಂದು ತಿಂಗಳ ಶ್ರಾವಣ ಮಾಸದ ವಿಶೇಷ ಕಾರ್ಯಕ್ರಮ ರೂಪಿಸಿದೆ. ದಿನನಿತ್ಯ ಭಕ್ತರ ಸೇವೆಯಲ್ಲಿ ಪೂಜೆ ನೆರವೇರುತ್ತದೆ.

ಆಸಕ್ತಿಯುಳ್ಳ ಧರ್ಮಾಭಿಮಾನಿಗಳು ತನು-ಮನ-ಧನ ಪೂರ್ವಕ ಸೇವೆ ಸಲ್ಲಿಸಿ ಲಿಂ. ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳವರ ಕೃಪೆಗೆ ಪಾತ್ರರಾಗಬೇಕೆಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಟ್ರಸ್ಟಿನ ಉಪಾಧ್ಯಕ್ಷ ಶೀಲವಂತರ ವೀರಭದ್ರಪ್ಪ, ಕಾರ್ಯದರ್ಶಿ ಹೆಚ್.ಪಿ. ಸುರೇಶ್ ಮೊದಲ್ಗೊಂಡು ಟ್ರಸ್ಟಿನ ಸದಸ್ಯರು ಉಪಸ್ಥಿತರಿದ್ದರು.

## ವಿಶೇಷ ಉಪನ್ಯಾಸ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಸರ್ಕಾರಿ ಪ್ರಥಮದರ್ಜೆ ಮಹಿಳಾ ಕಾಲೇಜಿನ ಐ.ಕ್ಯೂ.ಎ.ಸಿ ಮತ್ತು ಕನ್ನಡ ವಿಭಾಗ, ಗದಗ ಚಕೋರ ಸಾಹಿತ್ಯ ವಿಚಾರ ವೇದಿಕೆಗಳ ಸಂಯುಕ್ತ ಆಶ್ರಯದಲ್ಲಿ ಜುಲೈ 25ರಂದು ಬೆಳಿಗ್ಗೆ 10.30ಕ್ಕೆ ಸರ್ಕಾರಿ ಪ್ರಥಮದರ್ಜೆ ಮಹಿಳಾ ಕಾಲೇಜಿನ ಸಭಾಂಗಣದಲ್ಲಿ ಬಾನು ಮುಷ್ತಾಕ್ ಸಾಹಿತ್ಯದ ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮ ಜರುಗಲಿದೆ.

ಅಧ್ಯಕ್ಷತೆಯನ್ನು ಪ್ರೊ. ಎಂ.ಯು. ಹಿರೇಮಠ ವಹಿಸುವರು. ಸಾಹಿತ್ಯ ಅಕಾಡಮಿ ರಿಜಿಸ್ಟ್ರಾರ್ ಕರಿಯಪ್ಪ ಎನ್, ಎಲ್.ಎನ್. ಮುಕುಂದರ್ ಪಾಲ್ಗೊಳ್ಳುವರು. ಬೂಕರ್ ಪ್ರಶಸ್ತಿ ವಿಜೇತೆ ಬಾನು ಮುಷ್ತಾಕ್ ಮತ್ತು ಅವರ ಸಾಹಿತ್ಯದ ಕುರಿತು ಡಾ. ಸುಜಾತಾ ಬರದೂರ ವಿಶೇಷ ಉಪನ್ಯಾಸ ನೀಡುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಸಾಹಿತ್ಯ ಅಕಾಡೆಮಿ ಸದಸ್ಯರು, ಸಂಚಾಲಕರಾದ ಡಾ. ಅರ್ಜುನ ಗೊಳಸಂಗಿ, ಚಕೋರ ಸಾಹಿತ್ಯ ವೇದಿಕೆ ಸಂಚಾಲಕ ಎಸ್. ಯು. ಸಜ್ಜನಶೆಟ್ಟರ, ಐ.ಕ್ಯೂ.ಎ.ಸಿ ಸಂಚಾಲಕ ಮಹಬೂಬ ಆರಿಫ ಸದರಸೋಫೆವಾಲೆ, ಕಾಲೇಜಿನ ಬೋಧಕ-ಬೋಧಕೇತರ ಸಿಬ್ಬಂದಿಗಳು ಪಾಲ್ಗೊಳ್ಳುವರು ಎಂದು ಪ್ರಕಟಣೆ ತಿಳಿಸಿದೆ.

## ಧನಕರ್ ಅವರಿಗೆ ಬೀಳ್ಕೊಡುಗೆ ಸಮಾರಂಭ ಆಯೋಜಿಸಿ: ಕಾಂಗ್ರೆಸ್ ಬೇಡಿಕೆಗೆ ಸರ್ಕಾರದಿಂದ ಮೌನ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಉಪರಾಷ್ಟ್ರಪತಿ ಸ್ಥಾನಕ್ಕೆ ಜಗದೀಪ್ ಧನಕರ್ ಅವರ ಅನಿರೀಕ್ಷಿತ ರಾಜೀನಾಮೆಯನ್ನು ಪ್ರಶ್ನಿಸುತ್ತಿರುವ ಕಾಂಗ್ರೆಸ್, ಮಾಜಿ ಉಪರಾಷ್ಟ್ರಪತಿಗಳಿಗೆ "ಬೀಳ್ಕೊಡುಗೆ ಸಮಾರಂಭ" ಆಯೋಜಿಸುವಂತೆ ಬೇಡಿಕೆಯಿಟ್ಟಿದೆ. ಆದರೆ, ಈ ಬೇಡಿಕೆಗೆ ಸರ್ಕಾರದಿಂದ ಯಾವುದೇ ಪ್ರತಿಕ್ರಿಯೆ ಬಂದಿಲ್ಲವೆಂದು ವರದಿಯಾಗಿದೆ.

### ಪುಣ್ಯ ಸ್ಮರಣೋತ್ಸವ ಧರ್ಮ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

## ಬದುಕಿನ ಉನ್ನತಿಗೆ ಶ್ರೀ ಗುರು ಮುಖ್ಯ

■ವಿಜಯಸಾಕ್ಷಿ ಸುದ್ದಿ, ಚನ್ನಗಿರಿ

ಸಂಪತ್ತಿನ ಬದುಕಿನಲ್ಲಿ ಬಾಳುವ ಮನುಷ್ಯನಿಗೆ ಗುಣವಂತರ ಗುಣಾದರ್ಶಗಳು ಕಾಣಲಾರವು. ಬದುಕಿನ ಉನ್ನತಿ ಮತ್ತು ಶ್ರೇಯಸ್ಸಿಗೆ ಶ್ರೀ ಗುರು ಮುಖ್ಯ. ಪರಿವರ್ತನಾಶೀಲ ಸಮಾಜ ನಿರ್ಮಾಣಕ್ಕೆ ಗುರು ಬೋಧಾಮೃತ ಅವಶ್ಯಕವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ತಾಲೂಕಿನ ತಾವರೆಕೆರೆ ಶಿಲಾಮಠದ ಸಿದ್ಧಿಪುರುಷ ಲಿಂ. ಶ್ರೀ ಸಿದ್ಧಲಿಂಗ ಶಿವಾಚಾರ್ಯರ 54ನೇ ವರ್ಷದ ಮತ್ತು ಲಿಂ. ಶ್ರೀ ಚಂದ್ರಶೇಖರ ಶಿವಾಚಾರ್ಯರ 72ನೇ ವರ್ಷದ ಪುಣ್ಯ ಸ್ಮರಣೋತ್ಸವ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.



ಜೀವನದಲ್ಲಿ ಏನೇ ಸವಾಲುಗಳು ಬಂದರೂ ಅದನ್ನು ಸಮರ್ಥವಾಗಿ ಎದುರಿಸುವ ಆತ್ಮಬಲ ಇರಬೇಕು. ಸುಂದರವಾದ ಮನೆ ಕಟ್ಟಿದ ಮನುಷ್ಯ ಆ ಮನೆಯಲ್ಲಿ ಹೇಗೆ ಬಾಳಬೇಕೆಂಬುದನ್ನು ಮರೆಯುತ್ತಾನೆ. ಒಳ್ಳೆಯದಕ್ಕೂ ಕೆಟ್ಟದ್ದಕ್ಕೂ ಮನುಷ್ಯನ ಮನಸ್ಸೇ ಕಾರಣ. ಮನುಷ್ಯ ಕಲಿಯಬೇಕಾದದ್ದು ಬಹಳಷ್ಟಿದೆ. ದೃಢ ಸಂಕಲ್ಪ ಶಕ್ತಿ ಇಲ್ಲದೇ ಮಾಡುವ ಕೆಲಸಗಳು ಕೈಗೂಡುವುದಿಲ್ಲ. ಜೀವನದಲ್ಲಿ ನಂಬಿಕೆ ಮತ್ತು ವಿಶ್ವಾಸ ಮುಖ್ಯ. ಭವ ಬಂಧನದಿಂದ ಮುಕ್ತಗೊಳ್ಳಲು ಗುರು ತೋರಿದ ದಾರಿಯಲ್ಲಿ ಸಾಗಬೇಕಾಗುತ್ತದೆ ಎಂದರು.

ಸಮಾರಂಭ ಉದ್ಘಾಟಿಸಿದ ಶಾಸಕ ಬಸವರಾಜ ಶಿವಗಂಗಾ ಮಾತನಾಡಿ, ಮನುಷ್ಯನ ಮನದಂಗಳದಲ್ಲಿ ಸತ್ಯ-ಶಾಂತಿಗಳಂಥ ದೈವೀ ಗುಣಗಳನ್ನು ಸಂಪಾದಿಸಿಕೊಂಡು ಬಾಳಬೇಕು. ನೀತಿ, ಧರ್ಮ, ಗುರು ಮತ್ತು ದೇಶದ ಬಗೆಗೆ ಉದಾತ್ತ ಭಾವನೆಗಳಿರಬೇಕು. ಲಿಂಗೈಕ್ಯ ಉಭಯ ಶಿವಾಚಾರ್ಯರು ಧರ್ಮಮುಖಿಯಾಗಿ ಆಧ್ಯಾತ್ಮ ಜ್ಞಾನ ಸಂಪತ್ತನ್ನು ಭಕ್ತ ಸಮುದಾಯಕ್ಕೆ ಬೋಧಿಸಿದ್ದಾರೆ ಎಂದರು.

ನೇತೃತ್ವ ವಹಿಸಿದ ತಾವರೆಕೆರೆ-ಎಡೆಯೂರು ಮಠಾಧ್ಯಕ್ಷರಾದ ರೇಣುಕ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಎಲ್ಲರೂ ಎಲ್ಲಾ ಸಂದರ್ಭಗಳಲ್ಲಿ ಎಲ್ಲರ ಮೆಚ್ಚುಗೆ ಗಳಿಸಲು ಸಾಧ್ಯವಾಗುವುದಿಲ್ಲ. ಮನುಷ್ಯ ತನ್ನ ಅಂತರಂಗ ಒಪ್ಪುವ ಹಾಗೆ ಒಳ್ಳೆಯ ಕೆಲಸ ಮಾಡಬೇಕು. ಮರೆವು ಬಂದಾಗ ಅರಿವು ದೂರವಾಗುತ್ತದೆ. ಅಜ್ಞಾನ ಸರಿಸಿ ಜ್ಞಾನ ಕೊಡುವ ಶಕ್ತಿ ಶ್ರೀ ಗುರುವಿಗೆ ಇದೆ. ಲಿಂ. ಸಿದ್ಧಲಿಂಗ ಶಿವಾಚಾರ್ಯರು ಮತ್ತು ಲಿಂ. ಶ್ರೀ ಚಂದ್ರಶೇಖರ ಶಿವಾಚಾರ್ಯರು ತಮ್ಮ ಸಾಧನೆ-ಬೋಧನೆಗಳ ಮೂಲಕ ವೀರಶೈವ ಧರ್ಮ ಸಂಸ್ಕೃತಿಯನ್ನು ಬೆಳೆಸಿದ್ದಾರೆ ಎಂದರು.

ಹುಲಿಕೆರೆ ವಿರೂಪಾಕ್ಷಲಿಂಗ ಶಿವಾಚಾರ್ಯರು, ಕೆ.ಬಿದರೆ ಪ್ರಭುಕುಮಾರ ಶಿವಾಚಾರ್ಯರು, ಚಿಕ್ಕಮಗಳೂರು ಚಂದ್ರಶೇಖರ ಶಿವಾಚಾರ್ಯರು, ತೆ-ಂಡೇಕೆರೆ ಗಂಗಾಧರ ಶಿವಾಚಾರ್ಯರು, ಬೀರೂರು ರುದ್ರಮುನಿ ಶಿವಾಚಾರ್ಯರು, ಬಳ್ಳಾರಿ ಕಲ್ಯಾಣ ಸ್ವಾಮಿಗಳು, ಚನ್ನಗಿರಿ ಕೇದಾರ ಶಿವಶಾಂತವೀರ ಶಿವಾಚಾರ್ಯರು, ಹಣ್ಣೆ ಮರುಳಸಿದ್ಧ ಪಂಡಿತಾರಾಧ್ಯ ಶಿವಾಚಾರ್ಯರು, ಕರ್ಪೂರವಳ್ಳಿ ಅಭಿನವ ಚಂದ್ರಶೇಖರ ಶಿವಾಚಾರ್ಯರು, ವೃತ್ತ ನಿರೀಕ್ಷಕರಾದ ರವೀಶ್, ಗ್ರಾ.ಪಂ ಅಧ್ಯಕ್ಷೆ ಮಂಜುಳಾ ಬಿ.ಕೆ ಮೊದಲ್ಗೊಂಡು ಹಲವಾರು ಗಣ್ಯರು ಪಾಲ್ಗೊಂಡಿದ್ದರು.

ತಾವರೆಕೆರೆ ಶಿಲಾಮಠದ ಡಾ. ಅಭಿನವ ಸಿದ್ಧಲಿಂಗ ಶಿವಾಚಾರ್ಯ ಸ್ವಾಮಿಗಳು ಪ್ರಾಸ್ತಾವಿಕವಾಗಿ ಮಾತನಾಡಿದರು. ಕೀರ್ತಿಕುಮಾರ ಶಾಸ್ತ್ರಿ ಸ್ವಾಗತಿಸಿದರು. ಬಿಳಕಿ ರಾಚೋಟೇಶ್ವರ ಶಿವಾಚಾರ್ಯರು ನಿರೂಪಿಸಿದರು.

### ರೈಬರ್ ಫೌಂಡೇಶನ್, ಸಫಾ ಬೈತೂಲ್ ಮಾಲ್ ವತಿಯಿಂದ ನಿರುದ್ಯೋಗಿಗಳಿಗೆ ನೆರವು

## ಸ್ವಾವಲಂಬಿ ಜೀವನಕ್ಕೆ ಬೆಂಬಲ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ನಿರುದ್ಯೋಗಿಗಳನ್ನು ಉದ್ಯೋಗಿಗಳನ್ನಾಗಿ ಮಾಡುವ ಉದ್ದೇಶದಿಂದ ಹುಬ್ಬಳ್ಳಿ ನಗರದ ರೈಬರ್ ಫೌಂಡೇಶನ್ ಹಾಗೂ ಸಫಾ ಬೈತೂಲ್ ಮಾಲ್ ವತಿಯಿಂದ ನಿರುದ್ಯೋಗಿಗಳಿಗೆ ತಳ್ಳುಗಾಡಿಗಳನ್ನು ನೀಡುವ ಮೂಲಕ ಸ್ವಾವಲಂಬಿ ಜೀವನಕ್ಕೆ ಬೆಂಬಲ ನೀಡಿದರು.

ಇಲ್ಲಿನ ಜೆ.ಪಿ. ನಗರದ ಮದನಿ ಕಾಲೋನಿಯ ನ್ಯೂ ದಾನಿಶ್ ಸ್ಕೂಲ್ ಮೈದಾನದಲ್ಲಿ ಫೌಂಡೇಶನ್ ಅಧ್ಯಕ್ಷ ಆರೀಫ್ ರಾಯಚೂರು ನೇತೃತ್ವದಲ್ಲಿ ನಗರದ ವಿವಿಧ ಭಾಗದ ನಿರುದ್ಯೋಗಿಗಳಿಗೆ 50 ತಳ್ಳುಗಾಡಿಗಳನ್ನು ವಿತರಿಸಿದರು.




ಫೌಂಡೇಶನ್ ಈಗಾಗಲೇ ಸರ್ವೆ ಕಾರ್ಯ ನಡೆಸಿ, ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಿ, ಬಂಡವಾಳ ಸಮೇತವಾಗಿ 20 ತಳ್ಳುಗಾಡಿಗಳನ್ನು ತರಕಾರಿ, 20 ತಳ್ಳುಗಾಡಿಗಳನ್ನು ಹಣ್ಣು ಮಾರಾಟಕ್ಕೆ ಹಾಗೂ 10 ತಳ್ಳು ಗಾಡಿಗಳನ್ನು ಪ್ಲಾಸ್ಟಿಕ್ ವಸ್ತುಗಳನ್ನು ಮಾರಾಟಕ್ಕೆ ನೀಡಲಾಯಿತು.

ಈ ವೇಳೆ ಮಾತನಾಡಿದ ಫೌಂಡೇಶನ್ ಅಧ್ಯಕ್ಷ ಆರೀಫ್ ರಾಯಚೂರು, 2019ರಿಂದ ಸಾಮಾಜಿಕ ಕಾರ್ಯದಲ್ಲಿ ತೊಡಗಿರುವ ರೈಬರ್ ಫೌಂಡೇಶನ್ ಸ್ವಯಂ ಉದ್ಯೋಗಕ್ಕೆ ಉತ್ತೇಜನ ನೀಡುವ ಜೊತೆಗೆ, ಬಡ ಮಕ್ಕಳ ಶಿಕ್ಷಣಕ್ಕೆ ನೆರವು ನೀಡುವ ಕಾರ್ಯ ಮಾಡುತ್ತಿದೆ ಎಂದರು.

ಕೊರೋನಾ ಬಳಿಕ ಸಾಕಷ್ಟು ಜನರು ಉದ್ಯೋಗಾವಕಾಶಗಳನ್ನು ಕಳೆದುಕೊಂಡು, ಆರ್ಥಿಕ ಸಂಕಷ್ಟಕ್ಕೆ ಒಳಗಾಗಿದ್ದಾರೆ. ಈ ದಿಸೆಯಲ್ಲಿ ಫೌಂಡೇಶನ್ ಮಹಿಳೆಯರಿಗೆ ಉಚಿತವಾಗಿ ಟೇಲರಿಂಗ್, ಉಚಿತ ಕಂಪ್ಯೂಟರ್ ತರಬೇತಿ ನೀಡುತ್ತಿದೆ. ಇಂದು ಪ್ರತಿಯೊಬ್ಬರೂ ತಮ್ಮ ತುತ್ತಿನ ಚೀಲವನ್ನು ತಾವೇ ದುಡಿಮೆ ಮಾಡಿ, ಮತ್ತೊರ್ವರಿಗೆ ನೆರವಾಗಬೇಕು. ಈ ದಿಸೆಯಲ್ಲಿ ರೈಬರ್ ಫೌಂಡೇಶನ್ ನಿರುದ್ಯೋಗಿಗಳಿಗೆ ಬಂಡವಾಳ ಸಮೇತವಾಗಿ ತಳ್ಳು ಗಾಡಿಗಳನ್ನು ನೀಡಿದೆ. ಮುಂದಿನ ದಿನಗಳಲ್ಲಿ ಮತ್ತಷ್ಟು ಜನರಿಗೆ ನೆರವಾಗುವ ಕೆಲಸವನ್ನು ಫೌಂಡೇಶನ್ ಮಾಡಲಿದೆ ಎಂದರು.

ಈ ಸಂದರ್ಭದಲ್ಲಿ ಫೌಂಡೇಶನ್ ಸದಸ್ಯರಾದ ಖಲೀಲ್ ಖಾಜಿ, ಡಾ. ಅಶ್ಫಾಕ್ ಬಿಜಾಪುರ, ಸಮೀರ್ ಪೀರಜಾದೆ, ಲ್ಯಾಕತ್ ಅಲಿ ಸೈಯದ್, ಏರ್ ಫೋರ್ಸ್ ನಿವೃತ್ತ ಅಧಿಕಾರಿ ಬಶೀರ್ ಅಹ್ಮದ್ ಖಾನ್ ಪಠಾಣ್ ಮುಂತಾದವರು ಇದ್ದರು.

## ಶಾಲಾ ಅಭಿವೃದ್ಧಿಗೆ ಶ್ರಮ ವಹಿಸಿ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಸರಕಾರಿ ಹಿರಿಯ ಪ್ರಾಥಮಿಕ ಕನ್ನಡ ಹೆಣ್ಣು ಮಕ್ಕಳ ಶಾಲೆಯ ನೂತನ ಎಸ್.ಡಿ.ಎಂ.ಸಿ ಅಧ್ಯಕ್ಷರಾಗಿ ನಾಗರಾಜ ಖಂಡು ಹಾಗೂ ಉಪಾಧ್ಯಕ್ಷರಾಗಿ ಲಕ್ಷ್ಮವ್ವ ರಾಮಜೀ ಆಯ್ಕೆಯಾದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಮಾತನಾಡಿ, ಮಕ್ಕಳ ಸುರಕ್ಷತೆ ಹಾಗೂ ಶಾಲಾ ಅಭಿವೃದ್ಧಿಗೆ ಶ್ರಮ ವಹಿಸಬೇಕೆಂದು ಸಲಹೆ ನೀಡಿದರು. ಅಥಿತಿಯಾಗಿ ಆಗಮಿಸಿದ್ದ ಗ್ರಾ.ಪಂ ಸದಸ್ಯ ಪೀರಸಾಬ ನದಾಫ್ ಮಾತನಾಡಿ, ಮಕ್ಕಳ ಗುಣಾತ್ಮಕ ಕಲಿಕೆಗೆ ಹೆಚ್ಚು ಗಮನ ಹರಿಸಿ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಗ್ರಾ.ಪಂ ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಸದಸ್ಯರಾದ ಅನ್ನಪೂರ್ಣ ರಿತ್ತಿ, ಅನಸಮ್ಮ ಅಂಬಕ್ಕಿ, ರಜಿಯಾ ಬೇಗಂ ತಹಸೀಲ್ದಾರ, ರಮೇಶ ಭಾವಿ, ವಿರೂಪಾಕ್ಷಪ್ಪ ಬೆಟಗೇರಿ, ಅನ್ನಪೂರ್ಣ ಪೂಜಾರ, ಅಡಿವೆವ್ವ ಅಬ್ಬಿಗೇರಿ, ಫಕ್ಕೀರಮ್ಮ ಬೇಲೇರಿ ಉಪಸ್ಥಿತರಿದ್ದರು.

ಪಿ.ಡಿ.ಓ ಅಮೀರ ನಾಯಕ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಮಿತಿಯ ನೂತನ ಸದಸ್ಯರಾಗಿ ಚಂದ್ರಶೇಖರ ಬಣವಿ, ವೆಂಕಟೇಶ ದೊಂಗಡೆ, ನಿಂಗಯ್ಯಕಲ್ಮಠ, ಶಿವಾನಂದ ಅಬ್ಬಿಗೇರಿ, ಶಿವಪ್ಪ ಅಬ್ಬಿಗೇರಿ, ಹನುಮಂತ ಬಾರಕೇರ, ಯಾಶಿನಸಾಬ ಮುಲ್ಲಾ, ಜಂದಿಸಾಬ ತಹಸೀಲ್ದಾರ, ರೇಣುಕಾ ಹಿರೇಹಾಳ, ಜುಲೇಸಾಬ ದೌಲತ್ತರ, ಲಕ್ಷ್ಮೀ ಹಿರೇಹಾಳ, ಪಾರ್ವತಿ, ಕಲ್ಲೂರ, ಲಕ್ಷ್ಮೀ ಗಡಗಿ, ನಿರ್ಮಲಾ ಛಬ್ಬರಭಾವಿ, ಗಂಗಮ್ಮ ಹರ್ತಿ, ಭಾಗ್ಯ ಚವ್ಹಾಣ, ಆಯ್ಕೆಯಾದರು. ನೋಡಲ್ ಅಧಿಕಾರಿಯಾಗಿ ಹುಡೇದಮನಿ ಕಾರ್ಯ ನಿರ್ವಹಿಸಿದರು. ಸಿ.ಆರ್.ಪಿ ಮೀರಾ ನಾಯಕ ಸಮಿತಿಯ ರಚನಾ ನಿಯಮಾವಳಿಗಳನ್ನು ತಿಳಿಸಿದರು. ಶಾಲೆಯ ಪ್ರಧಾನಗುರು ಕಂಬಳಿ ಹಾಗೂ ಸಹ ಶಿಕ್ಷಕರು ಉಪಸ್ಥಿತರಿದ್ದರು.



**ಗದಗ:** ಜಿಲ್ಲೆಯ ನೂತನ ಪೊಲೀಸ್ ವರಿಷ್ಠಾಧಿಕಾರಿಗಳಾಗಿ ಅಧಿಕಾರ ವಹಿಸಿಕೊಂಡ ರೋಹನ್ ಜಗದೀಶ್ ಅವರನ್ನು ಬಿಜೆಪಿ ಜಿಲ್ಲಾ ಘಟಕದಿಂದ ಸ್ವಾಗತಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರಡಗಿ, ಶಹರ ಅಧ್ಯಕ್ಷರಾದ ಸುರೇಶ ಮರಳಪ್ಪನವರ, ಹಿರಿಯರಾದ ಎಂ.ಎಸ್. ಕರಿಗೌಡರ, ಅಶೋಕ ಸಂಕಣ್ಣವರ, ಕಾನೂನು ಪ್ರಕೋಷ್ಠದ ಜಿಲ್ಲಾ ಸಂಚಾಲಕ ಕೆ.ಪಿ. ಕೋಟಿಗೌಡರ, ಸುರೇಶ ಚಿತ್ತರಗಿ, ಗ್ರಾಮೀಣ ಅಧ್ಯಕ್ಷರಾದ ಭೂದಪ್ಪ ಹಳ್ಳಿ, ಸುಧೀರ ಕಾಟಿಗಾರ, ರವಿ ಮಾನವಿ, ಕಾರ್ಯದರ್ಶಿ ಲಿಂಗರಾಜ ಪಾಟೀಲ, ಶಂಕರ ಖಾಕಿ, ಶಂಕರ ಮಲ್ಲಸಮುದ್ರ ಸೇರಿದಂತೆ ಹಲವರು ಇದ್ದರು.

## ಕಾರ್ಗಿಲ್ ವಿಜಯೋತ್ಸವ ನಾಳೆ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಮಾಜಿ ಸೈನಿಕರ ಸಂಘ, ಗದಗ ಜಿಲ್ಲಾ ಮಾಜಿ ಹಾಗೂ ಹಾಲಿ ಪ್ಯಾರಾಮಿಲಿಟರಿ ಯೋಧರ ಕಲ್ಯಾಣ ಸಂಘವು ಜು. 26ರಂದು ಮುಂಜಾನೆ 8.15ಕ್ಕೆ ಗದುಗಿನ ಮಹಾತ್ಮ ಗಾಂಧಿ ಸರ್ಕಲ್ ಬಳಿ 26ನೇ ಕಾರ್ಗಿಲ್ ವಿಜಯೋತ್ಸವ ಆಚರಿಸಲಿದೆ.

1962, 1965, 1971, 1999ರ ಯುದ್ಧದಲ್ಲಿ ಹಾಗೂ ಆಪರೇಷನ್ ಸಿಂಧೂರ್‌ದಲ್ಲಿ ಹುತಾತ್ಮರಾದ ವೀರ ಯೋಧರಿಗೆ ಗೌರವ ನಮನ ಸಲ್ಲಿಸಲಾಗುವದು. ಹಾಲಿ ಮಾಜಿ ಸೈನಿಕರು, ವೀರನಾರಿಯರು, ಮಾಜಿ ಹಾಲಿ ಪ್ಯಾರಾ ಮಿಲಿಟರಿ ಯೋಧರು ಅಂದು ಬಿಳಿ ಶರ್ಟ್, ನೀಲಿ ಪ್ಯಾಂಟ್, ಜಾಕೆಟ್, ಸಂಘದ ಕ್ಯಾಪ್, ಮೆಡಲ್‌ಗಳನ್ನು ಧರಿಸಿ, ಸರಿಯಾದ ಸಮಯಕ್ಕೆ ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸಲು ಸಂಘಟಿಕರಾದ ಗೂಳಯ್ಯ ಮಾಲಗಿತ್ತಿಮಠ ವಿನಂತಿಸಿದ್ದಾರೆ.

## ಮತದಾರರ ಪಟ್ಟಿ ಪರಿಷ್ಕರಣೆ ವಿವಾದ: ಬಿಹಾರ ವಿಧಾನಸಭಾ ಚುನಾವಣೆ ಬಹಿಷ್ಕರಿಸುವ ಸಾಧ್ಯತೆ-ತೇಜಸ್ವಿ ಯಾದವ್

■ವಿಜಯಸಾಕ್ಷಿ ಸುದ್ದಿ, ಪಾಟ್ನಾ



ಬಿಹಾರದಲ್ಲಿ ನಡೆಯಲಿರುವ ವಿಧಾನಸಭಾ ಚುನಾವಣೆಗಳನ್ನು ವಿರೋಧ ಪಕ್ಷಗಳು ಬಹಿಷ್ಕರಿಸುವ ಸಾಧ್ಯತೆ ಇದೆ ಎಂದು ಬಿಹಾರ ವಿಧಾನಸಭೆಯ ವಿರೋಧ ಪಕ್ಷದ ನಾಯಕ ತೇಜಸ್ವಿ ಯಾದವ್ ಸೂಚಿಸಿದ್ದಾರೆ. ಈ ಕುರಿತು ಜನರು ಮತ್ತು ಮೈತ್ರಿಕೂಟದ ಪಾಲುದಾರರಿಂದ ಪ್ರತಿಕ್ರಿಯೆ ಪಡೆದ ನಂತರ ಅಂತಿಮ ನಿರ್ಧಾರ ಕೈಗೊಳ್ಳಲಾಗುವುದು ಎಂದು ಅವರು ತಿಳಿಸಿದ್ದಾರೆ.

ಈ ಹಿಂದೆ, ಯಾದವ್ ಅವರು ಭಾರತೀಯ ಚುನಾವಣಾ ಆಯೋಗ (ಇಸಿಐ) "ಬಿಜೆಪಿ ಮತ್ತು ಆಡಳಿತಾರೂಢ ಎನ್‌ಡಿಎ ಪರವಾಗಿ ಕಾರ್ಯನಿರ್ವಹಿಸುತ್ತಿದೆ" ಎಂದು ಆರೋಪಿಸಿ ವಾಗ್ದಾಳಿ ನಡೆಸಿದ್ದರು.

ಜನರು ಏನು ಬಯಸುತ್ತಾರೆ ಮತ್ತು ನಮ್ಮ ಮಿತ್ರಪಕ್ಷಗಳು ಏನು ಹೇಳುತ್ತವೆ ಎಂಬುದನ್ನು ನಾವು ನೋಡುತ್ತೇವೆ. ರಾಜ್ಯ ಚುನಾವಣೆಗಳನ್ನು ಪಕ್ಷಪಾತದಿಂದ ಮತ್ತು ಕುಶಲತೆಯಿಂದ ನಡೆಸಿದರೆ, ಯಾವ ಪಕ್ಷ ಎಷ್ಟು ಸ್ಥಾನಗಳನ್ನು ಗೆಲ್ಲುತ್ತದೆ ಎಂದು ಈಗಾಗಲೇ ನಿರ್ಧರಿಸಿದ್ದರೆ, ಅಂತಹ ಚುನಾವಣೆ ನಡೆಸಿ ಏನು ಪ್ರಯೋಜನ? ಜನರು ಮತ್ತು ನಮ್ಮ (ಮೈತ್ರಿಕೂಟದ) ಪಾಲುದಾರರಿಂದ ಪ್ರತಿಕ್ರಿಯೆ ಪಡೆದ ನಂತರ ಬಿಹಾರದಲ್ಲಿ ನಡೆಯಲಿರುವ ರಾಜ್ಯ ವಿಧಾನಸಭಾ ಚುನಾವಣೆಗಳನ್ನು ಬಹಿಷ್ಕರಿಸುವ ಬಗ್ಗೆ ನಾವು ಪರಿಗಣಿಸಬಹುದು ಎಂದು ಆರ್‌ಜೆಡಿ ಪಕ್ಷದ ವಿರೋಧ ಪಕ್ಷದ ನಾಯಕ ಯಾದವ್ ಯಾದವ್ ಹೇಳಿದ್ದಾರೆ.

## ಮಾಲೆಗಾಂವ್ ಪ್ರಕರಣ; ಮಹಾರಾಷ್ಟ್ರ ಸರಕಾರಕ್ಕೆ ಓವೈಸಿ ಪ್ರಶ್ನೆ

■ವಿಜಯಸಾಕ್ಷಿ ಸುದ್ದಿ, ಮುಂಬೈ

ಭಯೋತ್ಪಾದನೆಯನ್ನು ನಿರ್ಮೂಲನೆ ಮಾಡಬೇಕು. ಆದರೆ, ಸರ್ಕಾರ ಆರೋಪಿಯ ಧರ್ಮದ ಆಧಾರದ ಮೇಲೆ ಮೇಲ್ಮನವಿ ಸಲ್ಲಿಸಿದರೆ, ಈ ಹೋರಾಟದಲ್ಲಿ ರಾ-ಜಿಯಾದಂತೆ ಎಂದು ಹೈದರಾಬಾದ್ ಸಂಸದ ಹಾಗೂ ಎಐಎಂಐಎಂ ಪಕ್ಷದ ಮುಖ್ಯಸ್ಥ ಅಸಾದುದ್ದೀನ್ ಓವೈಸಿ ಹೇಳಿದ್ದಾರೆ.

## ಅಮ್ಮ ಫೌಂಡೇಶನ್ ವತಿಯಿಂದ ಡಾ. ಬಸವರಾಜ ಬಳ್ಳಾರಿ ಜನ್ಮದಿನ ಆಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಅಮ್ಮ ಫೌಂಡೇಶನ್ ಮಾರ್ಗದರ್ಶಕರು, ಗದಗ ಜಿಲ್ಲಾ ನೌಕರರ ಸಂಘದ ಜಿಲ್ಲಾಧ್ಯಕ್ಷರು, ತಾಲೂಕಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿ ಬಸವರಾಜ್ ಬಳ್ಳಾರಿಯವರ 48ನೇ ಜನ್ಮದಿನದ ಪ್ರಯುಕ್ತ ಅಮ್ಮ ಫೌಂಡೇಶನ್ ಬೆಂಗಳೂರು ಇವರ ಆಶ್ರಯದಲ್ಲಿ ಸಾಮಾಜಿಕ ಕಾರ್ಯಕ್ರಮಗಳ ಮೂಲಕ ಸರಳ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಯಿತು.

ವಿಕಲಚೇತನ ಹಾಗೂ ಬುದ್ಧಿಮಾಂದ್ಯ ಮಕ್ಕಳ ಶಾಲೆ ಬೆಟಗೇರಿಯಲ್ಲಿ ಮಕ್ಕಳ ಜೊತೆಗೂಡಿ ಜನ್ಮದಿನವನ್ನು ಆಚರಿಸಲಾಯಿತು. ರಣೆ ಮಾಡಲಾಯಿತು. ಗಾನಯೋಗಿ ಶ್ರೀ ಡಾ. ಪಂಡಿತ ಪುಟ್ಟರಾಜ ಗವಾಯಿಗಳ ಆಶ್ರಮದಲ್ಲಿ ಭಕ್ತರಿಗೆ ಮತ್ತು ವಿದ್ಯಾರ್ಥಿಗಳಿಗೆ ಅನ್ನ ಸಂತರ್ಪಣೆ ನೆರವೇರಿಸಲಾಯಿತು.



ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅಮ್ಮ ಫೌಂಡೇಶನ್ ಅಧ್ಯಕ್ಷರು, ವಕೀಲರಾದ ಮೈಲಾರಪ್ಪ ಡಿ.ಎಚ್, ಅಮ್ಮ ಫೌಂಡೇಶನ್ ಮಾರ್ಗದರ್ಶಕರಾದ ಡಾ. ಬಸವರಾಜ್ ಬಳ್ಳಾರಿಯವರ ಮಾರ್ಗದರ್ಶನದಲ್ಲಿ ಸದಾ ಸಾಮಾಜಿಕ ಕಾರ್ಯಗಳ ಜೊತೆಗೆ ವಿಶೇಷ ದಿನಗಳಲ್ಲಿ ದೀನ ದಲಿತರಿಗೆ, ಬಡವರಿಗೆ ಅನ್ನ ಸಂತರ್ಪಣೆ ಕಾರ್ಯಕ್ರಗಳನ್ನು ಮಾಡುವ ಮೂಲಕ ಸಾಮಾಜಿಕ ಸೇವೆಯಲ್ಲಿ ಫೌಂಡೇಶನ್ ಮುಂಚೂಣಿಯಲ್ಲಿದೆ ಎಂದರು.


ಅಮ್ಮ ಫೌಂಡೇಶನ್ ಪ್ರಧಾನ ಕಾರ್ಯದರ್ಶಿ ವಿಶ್ವನಾಥ ದಲಾಲಿ ಮಾತನಾಡಿ, ಸಮಾಜ ಸೇವೆಯಲ್ಲಿ ಡಾ. ಬಸವರಾಜ ಬಳ್ಳಾರಿ ಗುರುಗಳ ಸೇವೆ ಅಪಾರ. ಅವರ ಮಾರ್ಗದರ್ಶನದಲ್ಲಿ ಸಾಕಷ್ಟು ಸಮಾಜಮುಖಿ ಕಾರ್ಯಕ್ರಮಗಳು ನೆರವೇರಿದ್ದು, ಮುಂಬರುವ ದಿನಗಳಲ್ಲಿ ಇನ್ನಷ್ಟು ಸಾಮಾಜಿಕ ಕಾರ್ಯಕ್ರಮಗಳನ್ನು ಮಾಡುತ್ತೇವೆ. ಬಳ್ಳಾರಿ ಗುರುಗಳ ನಾಯಕತ್ವದ ಗುಣ, ಅವರ ವೃತ್ತಿ ನಿಷ್ಠೆ ನಮ್ಮೆಲ್ಲರಿಗೂ ಮಾದರಿಯಾಗಿದೆ ಎಂದರು. ಅಮ್ಮ ಫೌಂಡೇಶನ್ ಖಜಾಂಚಿ ಮಾರುತಿ ಜಿ.ಎಚ್, ಸಾಂಸ್ಕೃತಿಕ ಕಾರ್ಯದರ್ಶಿ ಪರಶುರಾಮ ತಳವಾರ, ಸಂಘಟನಾ ಕಾರ್ಯದರ್ಶಿ ಸುರೇಶ ಹಾಳಕೇರಿ, ಸಹ ಸಂಘಟನಾ ಕಾರ್ಯದರ್ಶಿ ಬಸವರಾಜ್ ಲಾಲಿ, ಸಾಮಾಜಿಕ ಜಾಲತಾಣ ಸಂಚಾಲಕ ಪ್ರಶಾಂತಯ್ಯ ಗುರುಮಠ, ಕಾರ್ಯಾಧ್ಯಕ್ಷ ಮಂಜುನಾಥ ನಿಡುಗುಂದಿ ಸೇರಿದಂತೆ ಸರ್ವ ಸದಸ್ಯರು ಇದ್ದರು.

## ಶ್ರೀ ಮುಪ್ಪಿನ ಬಸವಲಿಂಗ ಶ್ರೀಗಳ ಪುರ ಪ್ರವೇಶ

■ವಿಜಯಸಾಕ್ಷಿ ಸುದ್ದಿ, ನರೆಗಲ್ಲ

ಸಮೀಪದ ಹಾಲಕೆರೆ ಅನ್ನದಾನೇಶ್ವರ ಸ್ವಾಮಿಗಳ ಜಾತ್ರಾ ಮಹೋತ್ಸವದಲ್ಲಿ ಬೆಳ್ಳಿ ರಥೋತ್ಸವವು ಆಗಸ್ಟ್ 3, 4ರಂದು ಜರುಗಲಿದೆ. ಜಾತ್ರಾ ಮಹೋತ್ಸವದ ಪೂರ್ವಭಾವಿಯಾಗಿ ಜು. 23ರಂದು ಶ್ರೀ ಮುಪ್ಪಿನ ಬಸವಲಿಂಗ ಶ್ರೀಗಳು ಪುರ ಪ್ರವೇಶ ಮಾಡುವ ಮೂಲಕ ಜಾತ್ರಾಮಹೋತ್ಸವಕ್ಕೆ ಚಾಲನೆ ನೀಡಿದರು.

ಶ್ರೀಗಳು ಗ್ರಾಮದ ಹೊರವಲಯದಲ್ಲಿ ಆಗಮಿಸುತ್ತಿದ್ದಂತೆ ಗ್ರಾಮಸ್ಥರು ವಿವಿಧ ವಾದ್ಯ ಮೇಳಗಳೊಂದಿಗೆ ಆಗಮಿಸಿ ಶ್ರೀಗಳಿಗೆ ಗೌರವ ಸಲ್ಲಿಸಿ, ಶ್ರೀಗಳನ್ನು ಸಡಗರದಿಂದ ಸ್ವಾಗತಿಸಿದರು. ಶ್ರೀಗಳು ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆಯಲ್ಲಿ ತೆರಳಿದರು. ಮೆರವಣಿಗೆ ಊರಿನ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಅನ್ನದಾನೇಶ್ವರ ಮಠಕ್ಕೆ ತಲುಪಿತು. ಆಗಸ್ಟ್ 3ರಂದು ಗಣಾರಾಧನೆ, 4ರಂದು ನಾಡಿನ ಸಮಸ್ತ ಮಹಿಳೆಯರಿಂದ ಎಳೆಯಲ್ಪಡುವ ಬೆಳ್ಳಿ ರಥೋತ್ಸವ ಜರುಗುವುದು.



ಪುರಪ್ರವೇಶ ಮಾಡಿದ ಶ್ರೀಗಳು ಭಕ್ತರನ್ನು ಉದ್ದೇಶಿಸಿ ಮಾತನಾಡಿ, ಶಿವಾನುಭವ ಚಿಂತನೆಗಳಿಂದ ಮನಸ್ಸಿನ ಮೈಲಿಗೆಯನ್ನು ದೂರ ಮಾಡಿಕೊಂಡು ಆತ್ಮಸ್ಥೈರ್ಯ, ಆತ್ಮವಿಶ್ವಾಸ ಬೆಳೆಸಿಕೊಂಡು, ಭಕ್ತಿಯಿಂದ ಗುರುವಿನಲ್ಲಿ ನಾವು ಏನು ಬೇಕಾದರೂ ಕೇಳಿದಾಗ ಅದು ನಮಗೆ ಫಲ ನೀಡುವುದು. ಹಾಲಕೆರೆ ಗ್ರಾಮದ ಭಕ್ತರು ನಿರಂತರವಾಗಿ ಪ್ರತಿ ವರ್ಷವೂ ತಪ್ಪದೇ ನಮ್ಮನ್ನು ಪರ ಪ್ರವೇಶ ಮಾಡಿಕೊಳ್ಳುವ ಮುಖಾಂತರ ತಮ್ಮ ಭಕ್ತಿಯನ್ನು ಮೆರೆದಿದ್ದಾರೆ ಎಂದು ನುಡಿದರು.

ಈ ಸಂದರ್ಭದಲ್ಲಿ ಗ್ರಾ.ಪಂ ಅಧ್ಯಕ್ಷ ಗಿರೀಶಗೌಡ ಮುಲ್ಕಿಪಾಟೀಲ, ವೀರಣ್ಣ ಹಳ್ಳಿ, ಅಣ್ಣಪ್ಪ ಹುಲ್ಲಣ್ಣವರ, ಬಸವರಾಜ ಹೊನ್ನವಾಡ, ಸಿದ್ದನಗೌಡರ ಇನಾಮತಿ, ಪ್ರವೀಣ ಭೈರಗೊಂಡ, ಹನುಮಪ್ಪ ತೊಂಡಿಹಾಳ, ಅಶೋಕ ಮಾಳಗೌಡರ, ಹನಮಂತರಾಯ ಹಳ್ಳಿ, ಶಿವರುದ್ರಪ್ಪ ನವಲಗುಂದ, ಶರಣಪ್ಪ ಬೆಟಗೇರಿ, ಶರಣಪ್ಪ ಪೂಜಾರ, ಬಸವರಾಜ ಮೇಟಿ, ತಿಮ್ಮರೆಡ್ಡಪ್ಪ ಹೊಸಮನಿ ಹಾಗೂ ಭಕ್ತರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka